ಶುಕ್ರವಾರ, 12.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 111
Digital Varthe Kannada Daily
Volume 01 - Issue 111
Friday 12.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಹಾಸ್ಟೆಲ್‌ನಲ್ಲಿ BAMS ವಿದ್ಯಾರ್ಥಿಯ ಅನುಮಾನಾಸ್ಪದ ಸಾವು



ಗದಗ:ಕಾಲೇಜ್ ಹಾಸ್ಟೆಲ್‌ನಲ್ಲಿ ನೇಣು ಬಿಗಿದಿದ್ದ ಸ್ಥಿತಿಯಲ್ಲಿ ವಿದ್ಯಾರ್ಥಿಯ ಶವ ಪತ್ತೆ ಆಗಿರುವಂತಹ ಘಟನೆ ಜಿಲ್ಲೆಯ ಮುಂಡರಗಿ ಪಟ್ಟಣದ ಎಸ್‌ಬಿಎಸ್ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಹಾಸ್ಟೆಲ್‌ನಲ್ಲಿ ನಡೆದಿದೆ. BAMS ಅಂತಿಮ ವರ್ಷದಲ್ಲಿ ಓದುತ್ತಿದ್ದ ಈಶ್ವರ ಗಾದಗೆ(21) ಮೃತ ವಿದ್ಯಾರ್ಥಿ. ಕೊಲೆ ಮಾಡಿ ನೇಣು ಹಾಕಿದ್ದಾರೆ ಎಂದು ಕುಟುಂಬಸ್ಥರು ಆಡಳಿತ ಮಂಡಳಿ, ಸಿಬ್ಬಂದಿ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಸ್ಥಳಕ್ಕೆ ಮುಂಡರಗಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.

ಕುಟುಂಬಸ್ಥರಿಗೆ ಮಾಹಿತಿ ನೀಡದೇ ಆಸ್ಪತ್ರೆಗೆ ಮೃತದೇಹವನ್ನು ಸಾಗಾಟ ಮಾಡಿದ್ದಾರೆ. ಮೃತ ವಿದ್ಯಾರ್ಥಿ ಈಶ್ವರ ಗಾದಗೆ ಬೀದರ್ ಜಿಲ್ಲೆಯ ಬಾಲ್ಕಿ ತಾಲೂಕಿನ ಧನ್ನೂರ ಎಸ್ ಗ್ರಾಮದವರು. ಎಸ್‌ಬಿಎಸ್ ಆಯುರ್ವೇದಿಕ್ ಮೆಡಿಕಲ್ ಕಾಲೇಜ್‌ನಲ್ಲಿ BAMS ಅಂತಿಮ ವರ್ಷದಲ್ಲಿ ಓದುತ್ತಿದ್ದರು. ಆರು ತಿಂಗಳ ಹಿಂದೆ ಕೂಡ ಕಾಲೇಜ್ ಉಪನ್ಯಾಸಕ ಕಿರುಕುಳ ತಾಳಲಾರದೆ ನಿದ್ದೆ ಮಾತ್ರೆ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದರು. ಇನ್ನು ಎರಡು ಲೈನ್ ಇರುವ ಡೆತ್ ನೋಟ್ ಪತ್ತೆ ಆಗಿದೆ. 'ನನ್ನ ಸಾವಿಗೆ ಯಾರೂ ಕಾರಣ ಅಲ್ಲ, ನಾನೇ ಕಾರಣ. ಸಾರಿ ಮಮ್ಮಿ, ಪಪ್ಪಾ' ಅಂತ ಬರೆಯಲಾಗಿದೆ. ಆದರೆ ಇದು ನಮ್ಮ ಮಗ ಬರೆದ ಡೆತ್ ನೋಟ್ ಅಲ್ಲ, ನಮ್ಮ ಮಗನ ಬರವಣಿ ಅಲ್ಲ ಎಂದಿದ್ದಾರೆ ಕುಟುಂಬಸ್ಥರು.

ಕಾಲೇಜ್‌ನವರು ಸೃಷ್ಟಿ ಮಾಡಿರುವ ಡೆತ್ ನೋಟ್ ಅಂತ ಆಕ್ರೋಶ ವ್ಯಕ್ತಪಡಿಸಿದ್ದು, ನಮ್ಮ ಮಗನನ್ನು ಕೊಲೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ವಿದ್ಯಾರ್ಥಿ ಕಾಲಿನ ಬೆರಳಿ ಉಗುರು ಕಿತ್ತು ಚಿತ್ರಹಿಂಸೆ ನೀಡಿದ್ದಾರೆ. ಕತ್ತು, ದೇಹದ ಭಾಗದಲ್ಲಿ ರಕ್ತ ಗಾಯಗಳಾಗಿವೆ. ಕಾಲೇಜ್‌ನವರೇ ಕೊಲೆ ಮಾಡಿ ಆತ್ಮಹತ್ಯೆ ಕಥೆ ಸೃಷ್ಟಿಸಿದ್ದಾರೆ. ಅಷ್ಟೇ ಅಲ್ಲದೆ ಸಾಕ್ಷಿ ನಾಶ ಮಾಡಿದ್ದಾರೆ ಎಂದು ಕುಟುಂಬಸ್ಥರ ಆರೋಪವಾಗಿದೆ. ಇನ್ನು ಈಶ್ವರ ಗಾದಗೆ ಈ ಕಾಲೇಜ್‌ನಲ್ಲಿ ಆತ್ಮಹತ್ಯೆ ಮಾಡಿಕೊಂಡ ಮೂರನೇ ವಿದ್ಯಾರ್ಥಿ. ಈ ಹಿಂದೆ ಇಬ್ಬರು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದು, ಅದನ್ನು ಮುಚ್ಚಿ ಹಾಕಿದ್ದಾರೆ. ನಮ್ಮ ಮಗನಿಗೂ ಕಿರಕುಳ ನೀಡಿದ್ದಾರೆ. ಇದು ಅಂತಿಮ ವರ್ಷವಿರುವುದರಿಂದ ಸಮಾಧಾನ ಮಾಡಿದ್ದೇವು. ಆದರೆ ಕಾಲೇಜನವರು ಕೊಂದು ಬಿಟ್ಟರು. ಎಲ್ಲಾ ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್‌ನಲ್ಲಿ ಪಾಸಾಗಿದ್ದಾನೆ ಎಂದು ಮಗನ್ನು ಕಳೆದುಕೊಂಡ ಹೆತ್ತವರು ಕಣ್ಣೀರು ಹಾಕಿದ್ದಾರೆ.

## ಕುಡಿದ ಮತ್ತಿನಲ್ಲಿ ಸ್ನೇಹಿತನ ಕೊ ಲೆ ಮಾಡಿ ವಿಡಿಯೋ ಮಾಡಿದ್ದ ಆರೋಪಿ ಅರೆಸ್ಟ್



**ಹಾಸನ:** ಕುಡಿದ ಮತ್ತಿನಲ್ಲಿ ಸ್ನೇಹಿತನನ್ನು ಕೊಂದು, ಅದನ್ನ 'ಸೆಲ್ಫಿ ವಿಡಿಯೋ' ಮಾಡಿದ ಆರೋಪಿಯನ್ನು ಹಾಸನ ನಗರ ಪೊಲೀಸರು ಬಂಧಿಸಿದ್ದಾರೆ. ಈತ ಎರಡು ದಿನದ ಹಿಂದೆ ನಗರದ ಬಿಟ್ಟಗೋಡನಹಳ್ಳಿ ಬೈಪಾಸ್ ಪ್ರದೇಶದಲ್ಲಿ ತನ್ನ ಸ್ನೇಹಿತನನ್ನು ಕೊಲೆ ಮಾಡಿ ವೀಡಿಯೋ ಮಾಡಿದ್ದನು. ಬಂಧಿತ ಆರೋಪಿ ಉಲ್ಲಾಸ್ (21). ಹತ್ಯೆಗೀಡಾದವನು ಅವನ ಸ್ನೇಹಿತ ಕೀರ್ತಿ. ಇಬ್ಬರೂ ಆಟೋ ರಿಕ್ಷಾ ಚಾಲಕರಾಗಿದ್ದು, ಸುಮಾರು ಎರಡು ವರ್ಷಗಳಿಂದ ಸ್ನೇಹಿತರಾಗಿದ್ದರು ಎಂದು ತನಿಖೆಯಲ್ಲಿ ತಿಳಿದುಬಂದಿದ್ದು,

ಎರಡು ದಿನಗಳ ಹಿಂದೆ ಇಬ್ಬರೂ ಒಟ್ಟಿಗೆ ಎಣ್ಣೆ ಪಾರ್ಟಿ ಮಾಡಿದ್ದರು. ಆ ವೇಳೆ ಕ್ಷುಲಕ ಕಾರಣಕ್ಕೆ ಇಬ್ಬರ ನಡುವೆ ಜಗಳವಾಗಿದೆ. ಜಗಳ ತೀವ್ರವಾದಾಗ ಕೀರ್ತಿ ಉಲ್ಲಾಸನ ಕಪಾಳಕ್ಕೆ ಹೊಡೆದಿದ್ದ ಇದರಿಂದ ಕೋಪಗೊಂಡ ಉಲ್ಲಾಸ್, ಮತ್ತಷ್ಟು ಮದ್ಯಪಾನ ಮಾಡಿ, ಮತ್ತಿಬ್ಬರ ಜೊತೆಗೂಡಿ ಕೀರ್ತಿಯನ್ನು ಪಾರ್ಟಿ ನಡೆದ ಸ್ಥಳದಿಂದ ಹೊರಗೆ ಕರೆದೊಯ್ದಿದ್ದಾರೆ. ನಂತರ ಕೀರ್ತಿಗೆ ಕಲ್ಲಿನಿಂದ ಹಲ್ಲೆ ಮಾಡಿ ಕೊಲೆ ಮಾಡಿದ್ದಾರೆ. ಇದಿಷ್ಟು ಸಾಲದೆ ಉಲ್ಲಾಸ್ ತನ್ನ ಫೋನ್‌ನಲ್ಲಿ ಈ ಕೊಲೆಯಾದ ಕೀರ್ತಿ ಜೊತೆ ಸೆಲ್ಫಿ ವೀಡಿಯೋ ಮಾಡಿದ್ದಾನೆ.

ವಿಡಿಯೋದ ಆಧಾರದ ಹಾಸನ ಪೊಲೀಸರು ಉಲ್ಲಾಸನನ್ನು ಬಂಧಿಸಿದ್ದಾರೆ. ಆದರೆ, ಈ ಹಲ್ಲೆ ಮತ್ತು ಹತ್ಯೆಯಲ್ಲಿ ಉಲ್ಲಾಸನ ಜೊತೆಗೆ ಇನ್ನೂ ಮತ್ತಿಬ್ಬರು ಭಾಗವಹಿಸಿದ್ದಾರೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ. ಸಧ್ಯ ಪೊಲೀಸರು ಉಲ್ಲಾಸ್‌ನನ್ನು ಬಂಧಿಸಿದ್ದಾರೆ. ಮತ್ತಿಬ್ಬರು ಆರೋಪಿಗಳ ಹೆಸರುಗಳನ್ನ ಬಹಿರಂಗ ಪಡಿಸಿಲ್ಲವಾದರೂ ಅವರಿಗಾಗಿ ಶೋಧಕಾರ್ಯ ನಡೆಯುತ್ತಿದೆ.

ಕೊಲೆಗೆ ನಿಖರ ಕಾರಣ ಇನ್ನೂ ತಿಳಿಬಂದಿಲ್ಲ. ಮದ್ಯಪಾನ ಮಾಡಿ ಮತ್ತಿನಲಿದ್ದ ಇಬ್ಬರ ನಡುವೆ ಜಗಳವಾಗಿ ಕೋಪದಲ್ಲಿ ಜಗಳ ಮಾಡಿದ್ದಾರೆಯೇ ಅಥವಾ ಹಳೆಯ ದ್ವೇಷವೇನಾದರೂ ಈ ಘಟನೆಗೆ ಕಾರಣವಾಗಿದೆಯೇ ಎಂದು ತನಿಖೆಯಿಂದ ತಿಳಿಯಬೇಕಿದೆ.

ಈ ಘಟನೆಯ ಬಗ್ಗೆ ತಿಳಿಸ ಸಾರ್ವಜನಿಕರು ಹಾಸನ ನಗರದಲ್ಲಿ ಭಯದ ಬೀತಿ ಹುಟ್ಟಿಸಿದೆ. ಆರೋಪಿ ಉಲ್ಲಾಸ್‌ನನ್ನು ನ್ಯಾಯಾಲಯದಲ್ಲಿ ಹಾಜರು ಮಾಡಲಾಗುವುದು. ಪೊಲೀಸರು ಉಳಿದ ಇಬ್ಬರು ಆರೋಪಿಗಳ ಬಂಧನಕ್ಕೆ ಶೋಧನೆ ನಡೆಸುತ್ತಾರೆ. ವಿಡಿಯೋ ಸಾಕ್ಷ್ಯವನ್ನು ಪೊಲೀಸರು ಸುರಕ್ಷಿತವಾಗಿ ಸಂರಕ್ಷಿಸಿ, ನ್ಯಾಯಾಲಯದಲ್ಲಿ ಸಲ್ಲಿಕೆ ಮಾಡಲಿದ್ದಾರೆ. ಹತ್ಯೆಯ ಪ್ರೇರಣೆ ಮತ್ತು ಇನ್ನಷ್ಟು ವಿವರಗಳನ್ನು ಬಹಿರಂಗಪಡಿಸಲು ತನಿಖೆ ಮುಂದುವರೆದಿದೆ. ಅದೇನೆ ಆಗಿರಲಿ ಕೋಪದಲ್ಲಿ ಎರಡು ವರ್ಷದಿಂದ ಜೊತೆಗಿದ್ದ ಸ್ನೇಹಿತನನ್ನೇ ಕೊಲೆ ಮಾಡುವ ಹಂತಕ್ಕೆ ಹೋಗಿದ್ದಾನೆಂದರೆ ಈ ಘಟನೆಗೆ ಕಾರಣ ಏನಿರಬಹುದು ಕಾದು ನೋಡಬೇಕಿದೆ.

## ಕಾರು-ಬಸ್ ನಡುವೆ ಭೀಕರ ಅಪಘಾತ: ಸ್ಥಳದಲ್ಲೇ ಮೂವರು ದುರ್ಮ ರಣ

**ಚಿಕ್ಕಬಳ್ಳಾಪುರ:** ರಾಷ್ಟ್ರೀಯ ಹೆದ್ದಾರಿಯಲ್ಲಿನ ದೇವನಹಳ್ಳಿ ತಾಲ್ಲೂಕಿನ ರಾಣಿ ಕ್ರಾಸ್ ಬಳಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ಯುವಕರು ಸಾವನ್ನಪ್ಪಿದ್ದಾರೆ. ಚಿಕ್ಕಬಳ್ಳಾಪುರದ ಕಡೆಯಿಂದ ಬೆಂಗಳೂರು ಕಡೆಗೆ ಪ್ರಯಾಣಿಸುತ್ತಿದ್ದ ಖಾಸಗಿ ಕಾರೊಂದು ಡಿವೈಡರ್ ಹಾರಿ, ಎದುರು ದಿಕ್ಕಿನಿಂದ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಡಿಕ್ಕಿಯಾಗಿದೆ.

ಇದರ ಪರಿಣಾಮವಾಗಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಮೂವರು ಯುವಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ಅನೇಕ ಪ್ರಯಾಣಿಕರು ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತದಲ್ಲಿ ಸಾವನ್ನಪ್ಪಿದವರನ್ನು ದೇವನಹಳ್ಳಿ ತಾಲ್ಲೂಕಿನ ಸಾದಹಳ್ಳಿ ಗ್ರಾಮದವರೆಂದು ಗುರುತಿಸಲಾಗಿದೆ. ಸುಮನ್ (25), ಸಾಗರ್ (26) ಮತ್ತು ಮೋಹನ್ (33) ಎಂಬ ಮೂವರು ಈ ಘಟನೆಯಲ್ಲಿ ಸಾವನ್ನಪ್ಪಿದ್ದಾರೆ. ಇನ್ನೂ ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಬೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬಳಿಕ ಮೃತ ದೇಹಗಳನ್ನು ಪೋಸ್ಟ್ -ಮಾರ್ಟಂಗಾಗಿ ವೈದ್ಯಕೀಯ ವಿಶ್ವವಿದ್ಯಾಲಯದ ಆಸ್ಪತ್ರೆಗೆ ರವಾನಿಸಲಾಗಿದೆ ರಾಷ್ಟ್ರೀಯ ಹೆದ್ದಾರಿ 44 (ಪೂರ್ವ ಬೆಂಗಳೂರು-ಚಿಕ್ಕಬಳ್ಳಾಪುರ ರಸ್ತೆ) ಮೇಲೆ ದೇವನಹಳ್ಳಿಯಿಂದ ಸುಮಾರು 10-12 ಕಿಮೀ ದೂರದ ರಾಣಿ ಕ್ರಾಸ್ ಬಳಿ ಈ ಅಪಘಾತ ಸಂಭವಿಸಿದೆ. ತನಿಖೆಯ ಪ್ರಾಥಮಿಕ ಮಾಹಿತಿಯ ಪ್ರಕಾರ, ಅತೀ ವೇಗವಾಗಿ ಬೆಂಗಳೂರು ಕಡೆಗೆ ಬರುತ್ತಿದ್ದ ಕಾರು ಹಠಾತ್ತನೆ ನಿಯಂತ್ರಣ ಕಳೆದುಕೊಂಡು ಕಾಂಕ್ರೀಟ್ ಡಿವೈಡರ್‌ಗೆ ಹಾರಿ ಎದುರು ದಿಕ್ಕಿನೊಂದ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ನೇರವಾಗಿ ಡಿಕ್ಕಿ ಹೊಡೆದಿದೆ. ಘರ್ಷಣೆಯ ರಭಸಕ್ಕೆ ಕಾರು ಸಂಪೂ ರ್ಣವಾಗಿ ಜಖಂಗೊಂಡಿದ್ದು, ಬಸ್ಸಿನ ಮುಂಭಾಗದ ಭಾಗವೂ ಗಂಭೀರವಾಗಿ ಹಾನಿಗೊಂಡಿದೆ.

ಅಪಘಾತದ ಸಮಯದಲ್ಲಿ ಕೆಎಸ್‌ಆರ್‌ಟಿಸಿ ಬಸ್ಸಿನಲ್ಲಿ 15 ರಿಂದ 20 ಮಂದಿ ಪ್ರಯಾಣಿಕರು ಇದ್ದಿ ರಬಹುದೆಂದು ಅಂದಾಜಿಸಲಾಗಿದೆ. ಕಾರು ಡಿಕ್ಕಿಯ ಪರಿಣಾಮ ಬಸ್ಸಿನ ಮುಂಬಾಗದಲ್ಲಿ ಕುಳಿತಿದ್ದ ಅನೇಕರಿಗೆ ಗಾಯ ವಾಗಿದೆ. ಗಾಯಗೊಂ ಡವರನ್ನ ದೇವನಹಳ್ಳಿ ಸರ್ಕಾರಿ ಆಸ್ಪತ್ರೆ ಮತ್ತು ಬೆಂಗಳೂರಿನ ಇತರ ಆಸ್ಪತ್ರೆಗಳಿಗೆ ತ್ವರಿತವಾಗಿ ಸ್ಥಳಾಂತರಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆಯ ಬಗ್ಗೆ ದೇವನಹಳ್ಳಿ ಸಂಚಾರಿ ಪೊಲೀಸರು ಮಾಹಿತಿ ದಾಖಲಿಸಿದ್ದಾರೆ. ಅಪಘಾತದ ಕಾರಣಗಳನ್ನು ಕಂಡುಹಿಡಿಯಲು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಕಾರಿನ ಚಾಲಕನ ವೇಗ, ಅವನ ಆರೋಗ್ಯ ಸ್ಥಿತಿಗಳನ್ನ ಪೊಲೀಸರು ಪರಿಶೀಲಿಸುತ್ತಿದ್ದಾರೆ. ಪೊಲೀಸರು ಸಾಕ್ಷಿಗಳನ್ನು ಪತ್ತೆಹಚ್ಚಿ ಹೇಳಿಕೆ ಗಳನ್ನು ದಾಖಲಿಸುತ್ತಿದ್ದಾರೆ. ಅಪಘಾತದ ಸ್ಥಳದಲ್ಲಿ ಸಲ್ಪ ಸಮಯ ಸಂಚಾರ ಸ್ಥಗಿತಗೊಂಡಿತ್ತು ಬಳಿಕ ಬಸ್ ಹಾಗೂ ಕಾರುಗಳನ್ನ ರಸ್ತೆಯಿಂದ ತೆಗೆದು, ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

## 2 ಸರ್ಕಾರಿ ಬಸ್, ಜೀಪ್ ಮಧ್ಯೆ ಸರಣಿ ಅಪಘಾತ: ಮೂವರು ಸಾವು

**ಕಲಬುರಗಿ:** ಎರಡು ಕೆಎಸ್‌ಆರ್‌ಟಿಸಿ ಬಸ್ ಮತ್ತು ಜೀಪ್ ನಡುವೆ ಸಂಭವಿಸಿದ ಭೀಕರ ಸರಣಿ ಅಪಘಾತದಲ್ಲಿ ಗಂಡ ಹೆಂಡತಿ ಸೇರಿ ಮೂವರು ಸಾವನ್ನಪ್ಪಿರುವಂತಹ ಘಟನೆ ಕಲಬುರಗಿಯ ಸಂಚಾರಿ ಠಾಣೆ 1ರ ವ್ಯಾಪ್ತಿಯಲ್ಲಿ ನಡೆದಿದೆ. ಸುಲೋಚನಾ(70), ಚಂದ್ರಕಾಂತ್ (82) ಮತ್ತು ಚಾಲಕ ಮಿಟ್ಟೆಸಾಬ್(35) ಮೃತರು. ಇನ್ನು ಅಪಘಾತದಲ್ಲಿ ಮೂವರು ಗಾಯಗೊಂಡಿದ್ದು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಕಲಬುರಗಿ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇನ್ನು ಮೃತರು ಅಫಜಲಪುರ ತಾಲ್ಲೂಕಿನ ತೆಲ್ಲೂಣಗಿ ಗ್ರಾಮದ ನಿವಾಸಿಗಳು. ದಂಪತಿ ತಮ್ಮ ಗ್ರಾಮದಿಂದ ಕಲಬುರಗಿಗೆ ಜೀಪ್‌ನಲ್ಲಿ ತೆರಳುತ್ತಿದ್ದರು. ಅತಿವೇಗದ ಚಾಲನೆನಿಂದ ಎದುರಿಗೆ ಬರುತ್ತಿದ್ದ ಬಸ್‌ಗೆ ಜೀಪ್ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ. ಘಟನೆಯಲ್ಲಿ ಚಾಲಕ ಸ್ಥಳದಲ್ಲೇ ಸಾವನ್ನಪ್ಪಿದ್ದು, ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ದಂಪತಿ ಕೊನೆಯುಸಿರೆಳೆದಿದ್ದಾರೆ.



ಘಟನಾ ಸ್ಥಳಕ್ಕೆ ಕಲಬುರಗಿ ಪೊಲೀಸ್ ಆಯುಕ್ತ ಶರಣಪ್ಪ ಎಸ್.ಡಿ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಜೊತೆಗೆ ಖಾಸಗಿ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ಕೂಡ ವಿಚಾರಿಸಿದ್ದಾರೆ.

ಕುಖ್ಯಾತ ಮನೆಗಳ್ಳನ ಬಂಧನ

ಕ ನ್ಯಾ ಕು ಮಾ ರಿ ಗೆ ಕಳ್ಳತನಕ್ಕೆ ಹೊರಟ್ಟಿದ್ದ ಕುಖ್ಯಾತ ಮನೆಗಳ್ಳನನ್ನು ಕಲಬುರಗಿಯ ಸ್ಟೇಷನ್ ಬಜಾರ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ಧಾರವಾಡ ಮೂಲದ ನವೀನ್ ಜೋಶಿ(49) ಬಂಧಿತ ಕಳ್ಳ. ಸ್ಟೇಷನ್ ಬಜಾರ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಿವೃತ್ತ ಆರ್ ಎಫ್‌ಓ ಈರಣ್ಣ ಎಂಬುವವರ ಮನೆಯಿಂದ ಬರೋಬ್ಬರಿ 400 ಗ್ರಾಂ ಚಿನ್ನ ಕಳ್ಳತನ ಮಾಡಿದ್ದ.

ಅದರಲ್ಲಿ 230 ರೋಲ್ಡ್ ಗೋಲ್ಡ್ 167 ಗ್ರಾಂ ಅಸಲಿ ಸೇರಿದಂತೆ ಒಟ್ಟು 20.40 ಲಕ್ಷ ರೂ ಮೌಲ್ಯದ ಚಿನ್ನಾಭರಣವನ್ನು ಜಪ್ತಿ ಮಾಡಲಾಗಿದೆ. ಒಂದೇ ದಿನದಲ್ಲಿ ಕಳ್ಳತನ ಮಾಡಿ ನವೀನ್ ಪರಾರಿ ಆಗಿದ್ದ. ಸಿಸಿಟಿವಿ ದೃಶ್ಯದ ಆಧಾರದ ಮೇಲೆ ಆತನನ್ನು ಪೊಲೀಸರು ಬಂಧಿಸಿದ್ದಾರೆ. ಗೊನೆ ಕೊಯ್ಯುವಾಗ ಅಡಿಕೆ ಮರದಿಂದ ಬಿದ್ದು ಕಾರ್ಮಿಕ ಸಾವನ್ನಪ್ಪಿರುವಂತಹ ಘಟನೆ ಚಿಕ್ಕಮಗಳೂರು ಜಿಲ್ಲೆಯ ಕಳಸ ತಾಲೂಕಿನ ಬೂದಿಗುಂಡಿ ಗ್ರಾಮದಲ್ಲಿ ನಡೆದಿದೆ. ಮಂಜು (35) ಮೃತ ದುರ್ದೈವಿ. ಹಳುವಳ್ಳಿ ಗ್ರಾಮದ ಅಡಿಕೆ ತೋಟಕ್ಕೆ ಕೆಲಸಕ್ಕೆ ಹೋಗಿದ್ದ ಮಂಜು, ಈ ವೇಳೆ ಮರ ಹತ್ತಿ ಗೊನೆ ಕೊಯ್ಯುವಾಗ ಆಯಾ ತಪ್ಪಿ ಬಿದ್ದು ಸಾವನ್ನಪ್ಪಿದ್ದಾರೆ. ಕಳಸ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜಯ ಕರ್ನಾಟಕ ಸಂಘಟನೆಯ ಅದ್ದೂರಿ ರಾಜ್ಯೋತ್ಸವ; ಗಣ್ಯರು-ಕಲಾವಿದರ ಸಮಾಗಮಕ್ಕೆ ಅಧ್ಯಕ್ಷ ಸೋಮಶೇಖರ್ ಆಹ್ವಾನ



ತಾಲ್ಲೂಕು ಜಯ ಕರ್ನಾಟಕ ಸಂಘಟನೆ ವತಿಯಿಂದ ಅದ್ದೂರಿ 70ನೇ ಕನ್ನಡ ರಾಜ್ಯೋತ್ಸವ ಹಲವು ಸಂಸ್ಕೃತಿಕ ಮನರಂಜನೆ ಕಾರ್ಯಕ್ರಮ ಹಾಗೂ ವೀರಯೋಧರಿಗೆ, ಸಾಧಕರಿಗೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರದೊಂದಿಗೆ ಕಾರ್ಯಕ್ರಮಕ್ಕೆ ಗಣ್ಯರು ಚಲನಚಿತ್ರ ನಟ ನಟಿಯರು ಆಗಮಿಸಲಿದ್ದಾರೆ ಎಂದು ಜಯ ಕರ್ನಾಟಕ ಸಂಘಟನೆಯ ತಾಲೂಕು ಅಧ್ಯಕ್ಷ ಹೊನ್ನೇನಹಳ್ಳಿ ಸೋಮಶೇಖರ್ ತಿಳಿಸಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅದ್ದೂರಿ ಕಾರ್ಯಕ್ರಮದ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು._

ಜಯ ಕರ್ನಾಟಕ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷರು ಹಾಗೂ ಸರ್ವೋಚ್ಚ ನಾಯಕರಾದ ದಿವಂಗತ ಎಂ.ಮುತ್ತಪ್ಪ ರೈ ರವರ ದಿವ್ಯ ಆಶೀರ್ವಾದದೊಂದಿಗೆ ರಾಜ್ಯಾಧ್ಯಕ್ಷ ಡಾ:ಬಿ.ಎನ್. ಜಗಧೀಶ್ ಹಾಗೂ ಜಿಲ್ಲಾಧ್ಯಕ್ಷ ಡಾ.ಯೋಗಣ್ಣ ಅವರ ಮಾರ್ಗದರ್ಶನದಲ್ಲಿ ನವಂಬರ್ 14ರ ಭಾನುವಾರ ಸಂಜೆ 06ಗಂಟೆಗೆ ಕೃಷ್ಣರಾಜಪೇಟೆ ಪಟ್ಟಣದಲ್ಲಿರುವ ಪುರಸಭಾ ಮೈದಾನದಲ್ಲಿ ನಮ್ಮ ಜಯ ಕರ್ನಾಟಕ ಸಂಘಟನೆ ವತಿಯಿಂದ 70ನೇ ಅದ್ದೂರಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ತಾಲೂಕಿನಲ್ಲಿ ಜನಿಸಿ ದೇಶ ಸೇವೆ ಸಲ್ಲಿಸುತ್ತಿರುವ ಯೋಧರಿಗೆ, ವಿರುದ್ಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ,2024-25ನೇ ಸಾಲಿನ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರತಿಭಾ ಏರ್ಪಡಿಸಿದ್ದು ಈ ಸುಂದರ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಸಚಿವ ಕೆ.ಸಿ ನಾರಾಯಣಗೌಡರು ವಹಿಸಲಿದ್ದಾರೆ,

ಅಧ್ಯಕ್ಷತೆಯನ್ನು ಜಯ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಡಾ:ಬಿ.ಎನ್ ಜಗದೀಶ್, ಧ್ವಜಾರೋಹಣ ಶಾಸಕ ಎಚ್.ಟಿ ಮಂಜು, ಶ್ರೀ ಭುವನೇಶ್ವರಿ ಭಾವಚಿತ್ರ ಅನಾವರಣ ಮಾಜಿ ಶಾಸಕ ಕೆ. ಬಿ ಚಂದ್ರಶೇಖರ್, ಪುಸ್ಪಾರ್ಚನೆಯನ್ನು ಜಿಲ್ಲಾಧ್ಯಕ್ಷ ಯೋಗಣ್ಣ , ಸಲ್ಲಿಸಿದರೆ ಮುಖ್ಯ ಅತಿಥಿಗಳಾಗಿ ಡಾಲು ರವಿ, ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್,ಕೈ ಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ನಾಗೇಂದ್ರ ಕುಮಾರ್, ಮಾಜಿ ಶಾಸಕರಾದ ಬಿ.ಪ್ರಕಾಶ್, ಕಾಂಗ್ರೆಸ್ ಮುಖಂಡ ವಿಜಯರಾಮೇಗೌಡ, ಮನ್ಮುಲ್ ಮಾಜಿ ಅಧ್ಯಕ್ಷ ಎಂ.ಬಿ ಹರೀಶ್, ಎಂ.ಡಿ.ಸಿ.ಸಿ ನಿರ್ದೇಶಕ ಅಂಬರೀಶ್, ಕೆ ಯುಐಡಿಎಫ್ ಸಿ ನಿಗಮದ ಮಾಜಿ ಅಧ್ಯಕ್ಷ ಎಂ.ಡಿ. ಕೃಷ್ಣಮೂರ್ತಿ, ಕೆಪಿಸಿಸಿ ಸದಸ್ಯರಾದ ಕಿಕ್ಕೇರಿ ಸುರೇಶ್, ಜೆಡಿಎಸ್ ತಾಲೂಕು ಅಧ್ಯಕ್ಷ ಜಾನಕಿರಾಮ್ ಟಿಎಪಿಸಿಎಂಎಸ್ ನಿರ್ದೇಶಕ ಬಿ.ಎಂ ಕಿರಣ್,ಕಿಕ್ಕೇರಿ ಪ್ರಭಾಕರ್, ರಾಜಾಹುಲಿ ದಿನೇಶ್ ಸೇರಿದಂತೆ ಜಿಲ್ಲಾ-ತಾಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮಕ್ಕೆ ಭಾಗವಹಿಸಲಿದ್ದಾರೆ

ಕಾರ್ಯಕ್ರಮಕ್ಕೆ ವಿಶೇಷವಾದ ಮೆರುಗು ತುಂಬಲು ರಾತ್ರಿ 7:00 ಯಿಂದ ತುಮಕೂರು ಹೆಸರಾಂತ ದೇವು ಅರ್ಪಿಸುವ ದರ್ಶನ್ ಮೆಲೋಡಿಸ್ ಆರ್ಕೆಸ್ಟ್ರಾ ಏರ್ಪಡಿಸಲಿದ್ದು ಸುಂದರ ರಸಮಂಜರಿ ಕಾರ್ಯಕ್ರಮಕ್ಕೆ ಚಲನಚಿತ್ರ ಕನ್ನಡದ ಹೆಸರಾಂತ ನಾಯಕ ನಟರಾದ ಶ್ರೀಮುರಳಿ, ವಸಿಷ್ಠಸಿಂಹ, ಹಾಸ್ಯ ಕಲಾವಿದರಾದ ಟೆನ್ನಿಸ್ ಕೃಷ್ಣ , ಚಂದ್ರಪ್ರಭ, ಶೀಲನೆರೆ ಕೇಶವ, ರಾಜ್ಯ ವಿಷ್ಣು ಸೇನೆಯ ಪ್ರಶಾಂತ್ ಚಕ್ರವರ್ತಿ, ಬಿಗ್ ಬಾಸ್ ಖ್ಯಾತಿಯ ತ್ರಿವಿಕ್ರಮ್, ಸೇರಿದಂತೆ ಅನೇಕ ನಟ ನಟಿಯರು ಹಾಸ್ಯ ಕಲಾವಿದರು ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದು, ಪ್ರತಿಯೊಬ್ಬ ಕನ್ನಡ ಅಭಿಮಾನಿಗಳು ತಾಲೂಕಿನ ಜನತೆ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಯ ಕರ್ನಾಟಕ ಸಂಘಟನೆಯ ಕೆ.ಆರ್.ಪೇಟೆ ತಾಲೂಕು ಅಧ್ಯಕ್ಷ ಸೋಮಶೇಖರ್ ತಿಳಿಸಿದರ

ಬಳಿಕ ಮಾತನಾಡಿದ ತಾಲೂಕು ಯುವ ಘಟಕದ ಅಧ್ಯಕ್ಷ ಕೆ.ಎಲ್.ಮಹೇಶ್, ಮಹಿಳಾ ಘಟಕದ ತಾಲೂಕು ಅಧ್ಯಕ್ಷೆ ಜಯಲಕ್ಷ್ಮಮ್ಮ ಕಾರ್ಯಕ್ರಮಕ್ಕೆ ಪ್ರತಿಯೊಬ್ಬ ಕನ್ನಡ ಅಭಿಮಾನಿಗಳನ್ನು ಸ್ವಾಗತಿಸಿ ಕಾರ್ಯಕ್ರಮದ ಯಶಸ್ವಿಗೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜಯಕರ್ನಾಟಕ ಸಂಘಟನೆಯ ತಾಲ್ಲೂಕು ಯುವ ಘಟಕದ ಅಧ್ಯಕ್ಷ ಕಾಮನಹಳ್ಳಿ ಮಹೇಶ್, ಕಾರ್ಯಧ್ಯಕ್ಷ ಅನುವಿನಕಟ್ಟೆ ಆನಂದ್, ಮಹಿಳಾ ಘಟಕದ ತಾಲ್ಲೂಕು ಅಧ್ಯಕ್ಷೆ ಜಯಲಕ್ಷ್ಮಮ್ಮ, ತಾಲ್ಲೂಕು ಕಾರ್ಯಧ್ಯಕ್ಷೆ ಸರಸ್ವತಿ, ನಗರ ಮಹಿಳಾ ಅಧ್ಯಕ್ಷೆ ಅನುಪಮ, ತಾಲ್ಲೂಕು ಉಪಾಧ್ಯಕ್ಷರಾದ ಮನು, ಅಗ್ರಹಾರ ಯೋಗೇಶ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಪ್ರಭುನಾಯಕ, ಸಂಘಟನೆಯ ಕಾರ್ಯದರ್ಶಿ ಭಾವಾಜಿ ಚಂದ್ರು, ಕೆ.ಆರ್.ಪೇಟೆ ಟೌನ್ ಅಧ್ಯಕ್ಷ ಅಕ್ಷಯ್,ಕಿಕ್ಕೇರಿ ಹೋಬಳಿ ಅಧ್ಯಕ್ಷ ಸತೀಶ್, ಸಂಘಟನಾ ಕಾರ್ಯದರ್ಶಿ ರಾಘವೇಂದ್ರ, ಸಂತೆಬಾಚಹಳ್ಳಿ ಅಧ್ಯಕ್ಷ ಅರುಣ್ ಕುಮಾರ್, ಅಶೋಕ್, ಅಜಿತ್, ಯಶವಂತ್, ರವಿ, ರಾಕೇಶ್, ಸೇರಿದಂತೆ ಉಪಸ್ಥಿತ ರಿದ್ದರು.

## ಕಂದಕಕ್ಕೆ ಉರುಳಿ ಬಿದ್ದ ಟ್ರಕ್: 22 ಮಂದಿ ಕಾರ್ಮಿಕರು ಸಾವು



**ಅರುಣಾಚಲ ಪ್ರದೇಶ**: ದಿನಗೂಲಿ ಕಾರ್ಮಿಕರು ಕರೆದೊಯ್ಯುತ್ತಿದ್ದ ಟ್ರಕ್ ಆಳವಾದ ಕಂದಕಕ್ಕೆ ಉರುಳಿ ಬಿದ್ದಿದ್ದು, ಟ್ರಕ್‌ನಲ್ಲಿದ್ದ ಸುಮಾರು 22 ಮಂದಿ ದಿನಗೂಲಿ ಕಾರ್ಮಿಕರು ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಈ ಘಟನೆ ಬುಧವಾರ ಬೆಳಗಿನ ಜಾವ ಅರುಣಾಚಲ ಪ್ರದೇಶದ ಅಂಜಾವ್ ಜಿಲ್ಲೆಯಲ್ಲಿ ನಡೆದಿದೆ.

ಮಾಹಿತಿಗಳ ಪ್ರಕಾರ, ಅಸ್ಸಾಂ ರಾಜ್ಯದ ಟಿನ್ಸುಕಿಯಾ ಜಿಲ್ಲೆಯಿಂದ ದಿನಗೂಲಿ ಕೆಲಸಕ್ಕಾಗಿ ಕರೆದುಕೊಂಡು ಹೋಗುತ್ತಿದ್ದ ಕಾರ್ಮಿಕರನ್ನು ಹೊತ್ತಿದ್ದ ಟ್ರಕ್, ಅಂಜಾವ್ ಜಿಲ್ಲೆಯಲ್ಲಿರುವ ತಿರುವಿನಲ್ಲಿ ನಿಯಂತ್ರಣ ತಪ್ಪಿದೆ. ಚಾಲಕನ ನಿಯಂತ್ರಣ ತಪ್ಪುತ್ತಿದ್ದಂತೆಯೇ ವಾಹನ ನೇರವಾಗಿ ಕಂದಕಕ್ಕೆ ಉರುಳಿ ಬಿದ್ದಿದೆ. ಘಟನಾ ಸ್ಥಳಕ್ಕೆ ತಕ್ಷಣವೇ ಸ್ಥಳೀಯ ಪೊಲೀಸರು, ಜಿಲ್ಲಾ ಆಡಳಿತ ಮತ್ತು ವಿಪತ್ತು ನಿರ್ವಹಣಾ ತಂಡಗಳು ದೌಡಾಯಿಸಿದ್ದು ರಕ್ಷಣಾ ಕಾರ್ಯಾಚರಣೆ ಇನ್ನೂ ಮುಂದುವರೆದಿದೆ.

ಇಲ್ಲಿಯವರೆಗೆ ರಕ್ಷಣಾ ಸಿಬ್ಬಂದಿಗಳು 13 ಶವಗಳನ್ನು ಹೊರತೆಗೆದಿದ್ದಾರೆ. ಉಳಿದವರಿಗಾಗಿ ಶೋಧ ಕಾರ್ಯ ಇನ್ನೂ ಮುಂದುವರಿದಿದ್ದು, ಅವಶೇಷಗಳಡಿ ಹಲವರು ಸಿಲುಕಿರುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಕ್ಷಣೆ ನೀಡುವ ನಿಟ್ಟಿನಲ್ಲಿ ವೈದ್ಯಕೀಯ ತಂಡಗಳು ಕೂಡ ಸ್ಥಳದಲ್ಲಿ ನೆಲೆಸಿವೆ.

## ಕುಖ್ಯಾತ ನಕ್ಸಲ್ ನಾಯಕ ರಾಮಧೇರ್ ಮಜ್ಜಿ ಸೇರಿದಂತೆ 11 ಮಂದಿ ಭದ್ರತಾ ದಳಕ್ಕೆ ಶರಣು

**ಮುಂಬೈ**: ಕುಖ್ಯಾತ ನಕ್ಸಲ್ ಕಮಾಂಡರ್ ಮತ್ತು ಕೇಂದ್ರ ಸಮಿತಿ ಸದಸ್ಯ (ಸಿಸಿಎಂ) ರಾಮಧೇರ್ ಮಜ್ಜಿ ಪೊಲೀಸರ ಮುಂದೆ ಶರಣಾಗಿದ್ದಾನೆ. ಈತನನ್ನು ಇತ್ತೀಚೆಗೆ ಎನ್‌ಕೌಂಟರ್‌ನಲ್ಲಿ ಹತ್ಯೆಯಾದ ಹಿದ್ಮಾಗೆ ಸಮಾನವೆಂದು ಪರಿಗಣಿಸಲಾಗಿದೆ. ಮಜ್ಜಿ ತಲೆಗೆ 1 ಕೋಟಿ ರೂಪಾಯಿ ಬಹುಮಾನ ಘೋಷಿಸಲಾಗಿತ್ತು ಛತ್ತೀಸ್‌ಗಢ ಬಕರ್ ಕಟ್ಟಾದ ಪೊಲೀಸ್ ಠಾಣೆಯಲ್ಲಿ ಮಜ್ಜಿ ಶರಣಾಗಿದ್ದಾನೆ. ಮಜ್ಜಿ ಜೊತೆಗೆ ಚಂದು ಉಸೆಂಡಿ, ಲಲಿತಾ, ಜಾನಕಿ, ಪ್ರೇಮ್, ರಾಮಸಿಂಗ್ ದಾದಾ, ಸುಕೇಶ್ ಪೊಟ್ಟಮ್, ಲಕ್ಷ್ಮಿ, ಶೀಲಾ, ಸಾಗರ್, ಕವಿತಾ ಮತ್ತು ಯೋಗಿತಾ ಎಂಬ ನಕ್ಸಲರು ಸಹ ಶರಣಾಗಿದ್ದಾರೆ. ಇವರ ಶರಣಾಗತಿಯೊಂದಿಗೆ,

ಮಹಾರಾಷ್ಟ್ರ ಮಧ್ಯಪ್ರದೇಶ, ಛತ್ತೀಸ್‌ಗಢ ವಲಯಗಳು ನಕ್ಸಲ್ ಮುಕ್ತವಾಗುತ್ತಿದೆ ಎಂದು ವರದಿಯಾಗಿದೆ. ಬಾಲಘಾಟ್‌ನಲ್ಲಿ ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಅವರ ಮುಂದೆ ನಾಲ್ವರು ಮಹಿಳೆಯರು ಸೇರಿದಂತೆ ಹತ್ತು ನಕ್ಸಲರು ಶರಣಾದರು. ಅವರಿಗೆ ಸಂವಿಧಾನದ ಪ್ರತಿಯನ್ನು ನೀಡುವ ಮೂಲಕ ಮುಖ್ಯವಾಹಿನಿಗೆ ಬರಮಾಡಿಕೊಳ್ಳಲಾಯಿತು. ಈ ವೇಳೆ ಶರಣಾದ ನಕ್ಸಲರು ತಮ್ಮ ಶಸ್ತ್ರಾಸ್ತ್ರಗಳನ್ನು ಹಸ್ತಾಂತರಿಸಿದರು. ಈ ಹಿಂದೆ ನಕ್ಸಲಿಸಂ ವಿಚಾರವಾಗಿ ಮಾತನಾಡಿದ್ದ ಛತ್ತೀಸ್‌ಗಢ ಉಪಮುಖ್ಯಮಂತ್ರಿ ಅರುಣ್ ಸಾವೊ, ನಕ್ಸಲಿಸಂನ್ನು 80% ತೊಡೆದು ಹಾಕಲಾಗಿದೆ. ಮಾರ್ಚ್ 2026ರ ವೇಳೆಗೆ ರಾಜ್ಯವು ಈ ಹಿಂಸಾಚಾರದಿಂದ ಮುಕ್ತವಾಗಲಿದೆ. ಬಸ್ತಾರ್‌ನ ಜನರು ಯಾವುದೆ ಭಯವಿಲ್ಲದೆ ಬದುಕಬಹುದಾಗಿದೆ ಎಂದಿದ್ದರು. ಮೋದಿ ಸರ್ಕಾರ ನಕ್ಸಲಿಸಂ ವಿರುದ್ಧ ಶಾಶ್ವತ ಪರಿಹಾರದತ್ತ ಸಾಗುತ್ತಿದೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.


## ಮಗು ಸೇರಿ ನಾಲ್ವರನ್ನು ಕೊಚ್ಚಿ ಕೊಂದ ದುರುಳನಿಗೆ ಶಾಕ್: ಕೋರ್ಟ್ ಮಹತ್ವದ ತೀರ್ಪು

**ಮಡಿಕೇರಿ:**ತಾನು ಸಂಬಂಧ ಹೊಂದಿದ್ದ ಮಹಿಳೆ ಮೇಲೆ ಅನುಮಾನ ಮತ್ತು ಕಾಫಿ ಬೆಳೆಯ ಆಸೆಗೆ ಮಗು ಸೇರಿ ನಾಲ್ವರನ್ನು ಬರ್ಬರವಾಗಿ ಕೊಚ್ಚಿ ಕೊಂದಿದ್ದ ಆರೋಪಿಗೆ ವಿರಾಜಪೇಟೆ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮರಣ ದಂಡನೆ ಶಿಕ್ಷೆ ವಿಧಿಸಿದೆ. ಪ್ರಕರಣದ ವಿಚಾರಣೆ ನಡೆಸಿರುವ ನ್ಯಾಯಾಧೀಶ ಎಸ್. ನಟರಾಜ್, ಇದೊಂದು ಅಪರೂಪದಲ್ಲಿ ಅಪರೂಪದ ಪ್ರಕರಣ ಎಂದು ಪರಿಗಣಿಸಿ ಶಿಕ್ಷೆ ವಿಧಿಸಿದ್ದಾರೆ. ಘಟನೆ ನಡೆದು ಕೇವಲ 9 ತಿಂಗಳಲ್ಲಿ ವಿಚಾರಣೆ ಪೂರ್ಣಗೊಂಡು ಶಿಕ್ಷೆ ಘೋಷಣೆಯಾಗಿರುವುದು ಕೂಡ ಇಲ್ಲಿ ಗಮನಾರ್ಹ. ಇದೇ ವರ್ಷ ಮಾರ್ಚ್ 27ರಂದು ಕೊಡಗು ಜಿಲ್ಲೆ ಪೊನ್ನಂಪೇಟೆ ತಾಲ್ಲೂಕಿನ ಬೇಗೂರು ಗ್ರಾಮದ ಬಾಳುಗೋಡಿನ ತೋಟದ ಮನೆಯೊಂದರಲ್ಲಿ ನಾಲ್ವರನ್ನು ಭೀಕರವಾಗಿ ಮರ್ಡರ್ ಮಾಡಲಾಗಿತ್ತು.

70 ವರ್ಷದ ಕರಿಯ ಹಾಗೂ ಆತನ ಪತ್ನಿ ಗೌರಿ, ಮೊಮ್ಮಗಳು 30 ವರ್ಷದ ನಾಗಿ, ನಾಲ್ಕು ವರ್ಷದ ಕಾವೇರಿ ಘಟನೆಯಲ್ಲಿ ಮೃತಪಟ್ಟಿದ್ದರು. ಪ್ರಕರಣ ಬೆನ್ನತ್ತಿದ ಪೊಲೀಸರು ಇದೇ ಮನೆಯಲ್ಲಿ ಕಳೆದ ಆರು ತಿಂಗಳಿನಿಂದ ವಾಸವಿದ್ದ ಕೇರಳ ಮೂಲದ ಮಾನಂದವಾಡಿ ಜಿಲ್ಲೆಯ ಅತ್ತಿಮಾಲಾ ನಿವಾಸಿ ಗಿರೀಶ ಎಂಬುವನನ್ನು ಅನುಮಾನದ ಆಧಾರದಲ್ಲಿ ವಶಕ್ಕೆ ಪಡೆದಿದ್ದರು. ವಿಚಾರಣೆ ವೇಳೆ ತಾನೇ ಕೊಲೆ ಮಾಡೊರೋದಾಗಿ ಆತ ಒಪ್ಪಿಕೊಂಡಿದ್ದ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## CIC ನೇಮಕಾತಿ': ಪ್ರಧಾನಿ ಮೋದಿ ಜೊತೆ ರಾಹುಲ್ ಗಾಂಧಿ ಮಹತ್ವದ ಚರ್ಚೆ

**ನವದೆಹಲಿ:** ಮುಖ್ಯ ಮಾಹಿತಿ ಆಯುಕ್ತರ ನೇಮಕಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಬುಧವಾರ ಸಭೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಚಳಿಗಾಲದ ಅಧಿವೇಶನ ನಡೆಯುತ್ತಿರುವ ಸಂದರ್ಭದಲ್ಲಿ ನಡೆದ ಈ ಸಭೆಯು ಮೊದಲಿನಿಂದಲೇ ಮುಖ್ಯ ಮಾಹಿತಿ ಆಯುಕ್ತರ ನೇಮಕಾತಿ ವಿಚಾರಕ್ಕೆ ಸಂಬಂಧಿಸಿದೆ ಎಂದು ತಿಳಿದುಬಂದಿದೆ. ಈ ಚರ್ಚೆ ನಿರೀಕ್ಷೆಗೂ ಮೀರಿ ಸಮಯ ತೆಗೆದುಕೊಂಡ ಕಾರಣ ರಾಜಕೀಯ ವಲಯದಲ್ಲಿ ವಿವಿಧ ಊಹಾಪೋಹಗಳು ಹರಿದಾಡುತ್ತಿವೆ. ಮೂಲಗಳ ಪ್ರಕಾರ, ಈ ಸಭೆಯ ಮುಖ್ಯ ಉದ್ದೇಶ ಮುಖ್ಯ ಮಾಹಿತಿ ಆಯುಕ್ತ (CIC) ಹಾಗೂ ಎಂಟು ಮಾಹಿತಿ ಆಯುಕ್ತರ ನೇಮಕಾತಿ ಕುರಿತ ಚರ್ಚೆಯಾಗಿತ್ತು. ಜೊತೆಗೆ ಕೇಂದ್ರ ವಿಜಿಲೆನ್ಸ್ ಆಯುಕ್ತರ ನೇಮಕಾತಿಯ ಮೇಲೂ ಚರ್ಚೆ ನಡೆಸಿದೆ. ಮಾಹಿತಿ ಹಕ್ಕು ಕಾಯ್ದೆಯ ಸೆಕ್ಷನ್ 12(3) ಪ್ರಕಾರ, ಮಾಹಿತಿ ಆಯುಕ್ತರ ನೇಮಕಾತಿಗೆ ಪ್ರಧಾನ ಮಂತ್ರಿಗಳು ಅಧ್ಯಕ್ಷತೆ ವಹಿಸುವ ಆಯ್ಕೆ ಸಮಿತಿಯಲ್ಲಿ ವಿರೋಧ ಪಕ್ಷದ ನಾಯಕ ಮತ್ತು ಪ್ರಧಾನಿ ನಾಮನಿರ್ದೇಶನ ಮಾಡಿದ ಒಬ್ಬ ಕೇಂದ್ರ ಸಚಿವರು ಸೇರಿರಬೇಕು. ಈ ಬಾರಿ ಸಚಿವ ಅಮಿತ್ ಶಾ ಸಮಿತಿಯಲ್ಲಿ ಭಾಗವಹಿಸಿದ್ದರು.

ರಾಹುಲ್ ಗಾಂಧಿ ಮಧ್ಯಾಹ್ನ 1 ಗಂಟೆಗೆ ಪ್ರಧಾನ ಮಂತ್ರಿ ಕಚೇರಿಗೆ ಆಗಮಿಸಿದ್ದು, ಸಭೆ 1.07ಕ್ಕೆ ಪ್ರಾರಂಭವಾಯಿತು. ಆದರೆ ಸಭೆಯು ನಿರೀಕ್ಷೆಗಿಂತ ಹೆಚ್ಚು ಕಾಲ ಮುಂದುವರೆದಿದ್ದು, ಸಂಸದರಲ್ಲಿ ಕುತೂಹಲ ಹೆಚ್ಚಿಸಿತ್ತು.

88 ನಿಮಿಷಗಳ ನಂತರ ರಾಹುಲ್ ಗಾಂಧಿ ಸಭೆಯಿಂದ ಹೊರಬಂದಾಗ, ಅವರು ಎಲ್ಲಾ ನೇಮಕಾತಿ ಪ್ರಕ್ರಿಯೆಗಳ ಕುರಿತು ತಮ್ಮ ಆಕ್ಷೇಪಣೆಗಳನ್ನು ಲಿಖಿತವಾಗಿ ಸಲ್ಲಿಸಿದ್ದರೆಂದು ತಿಳಿದುಬಂತು. ಹಿಂದೆಯೂ ವಿರೋಧ ಪಕ್ಷದ ಪ್ರತಿನಿಧಿಗಳಾಗಿ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಹಲವು ಸಂದರ್ಭಗಳಲ್ಲಿ ನೇಮಕಾತಿ ಶಿಫಾರಸುಗಳ ವಿರುದ್ಧ ಅಭಿಪ್ರಾಯ ವ್ಯಕ್ತಪಡಿಸಿದ್ದರು. ಸದ್ಯ ಕೇಂದ್ರ ಮಾಹಿತಿ ಆಯೋಗದಲ್ಲಿ ಒಟ್ಟು 8 ಹುದ್ದೆಗಳು ಖಾಲಿಯಾಗಿದ್ದು, ಕೇವಲ ಇಬ್ಬರು ಮಾಹಿತಿ ಆಯುಕ್ತರು ಆನಂದಿ ರಾಮಲಿಂಗಂ ಮತ್ತು ವಿನೋದ್ ಕುಮಾ ರ್ ತಿವಾರಿಕಾರ್ಯ ನಿರ್ವಹಿಸುತ್ತಿದ್ದಾರೆ. ಸೆಪ್ಟೆಂಬರ್ 13 ರಂದು ಹಿರಾಲಾಲ್ ಸಮಾರಿಯಾ ಅವರು ನಿವೃತ್ತಿಯಾದ ನಂತರ ಮುಖ್ಯ ಮಾಹಿತಿ ಆಯುಕ್ತರ ಹುದ್ದೆಯೂ ಖಾಲಿಯಾಗಿದೆ. ಸಿಐಸಿಯ ವೆಬ್‌ಸೈಟ್ ಪ್ರಕಾರ, 30,838 ಪ್ರಕರಣಗಳು ಬಾಕಿ ಉಳಿದಿವೆ. ಸರ್ಕಾರವು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ ಮಾಹಿತಿಯ ಪ್ರಕಾರ, ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸಲು ಈ ಸಭೆ ನಿಗದಿಪಡಿಸಲಾಗಿದೆ. ಸಿಐಸಿ ಮತ್ತು ರಾಜ್ಯ ಮಾಹಿತಿ ಆಯೋಗಗಳ ಖಾಲಿ ಹುದ್ದೆಗಳ ವಿಚಾರಣೆ ಸಂದರ್ಭದಲ್ಲಿ ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ.ಎಂ. ನಟರಾಜ್, ಸಮಿತಿಯ ಸಭೆಗೆ ಸದಸ್ಯರಿಗೆ ನೋಟಿಸ್ ಕಳುಹಿಸಲಾಗಿದೆ ಎಂದು ನ್ಯಾಯಾಂಗಕ್ಕೆ ತಿಳಿಸಿದ್ದರು.

ಆರ್‌ಟಿಐ ದೂರುಗಳು ಮತ್ತು ಮೇಲ್ಮನವಿಗಳ ಅಂತಿಮ ಮೇಲ್ಮನವಿ ಪ್ರಾಧಿಕಾರವಾದ ಸಿಐಸಿ ಕೆಲಸ ಮಾಡಲು ಹುದ್ದೆಗಳ ಭರ್ತಿ ಮಾಡುವುದು ಅತ್ಯಾವಶ್ಯಕ.

## ಪರಪ್ಪನ ಅಗ್ರಹಾರದಲ್ಲಿ ಮತ್ತೊಮ್ಮೆ ಭಾರೀ ಪ್ರಮಾಣದ ನಿಷೇಧಿತ ವಸ್ತುಗಳು ಪತ್ತೆ



ಬೆಂಗಳೂರು: ಪರಪ್ಪನ ಅಗ್ರಹಾರ ಜೈಲಿನಲ್ಲಿ ನಿಷೇಧಿತ ವಸ್ತುಗಳನ್ನು ತಡೆಯಲು ಎಷ್ಟೇ ಕಠಿಣ ನಿಯಮಗಳನ್ನು ಜಾರಿಗೆ ತಂದರೂ, ಜೈಲಿನ್ಲಿ ಮತ್ತೆ ಮತ್ತೆ ನಿಷೇಧಿತ ವಸ್ತುಗಳು ಕಾಣಸಿಗುತ್ತದೆ. ಇದೇ ರೀತಿ ಮಂಗಳವಾರ (ಡಿಸೆಂಬರ್ 10) ರಾತ್ರಿ ನಡೆಸಿದ ಆಕಸ್ಮಿಕ ದಾಳಿಯಲ್ಲಿ ಮತ್ತೊಮ್ಮೆ ಜೈಲಿನ ಭದ್ರತಾ ವ್ಯವಸ್ಥೆಯ ದೌರ್ಬಲ್ಯವನ್ನು ಬಯಲುಮಾಡಿದೆ.

ರಾತ್ರಿ 8 ಗಂಟೆಯಿಂದ 8:45ರವರೆಗೆ ಜೈಲು ಅಧಿಕಾರಿಗಳು ಮತ್ತು ವಿಶೇಷ ತಂಡವು ಸಂಪೂರ್ಣ ಜೈಲನ್ನು ತೀವ್ರ ಶೋಧ ನಡೆಸಿದ್ದು, ಈ ಬಾರಿ ಕೂಡ ಆಘಾತಕಾರಿ ಪ್ರಮಾಣದ ನಿಷೇಧಿತ ವಸ್ತುಗಳು ಪತ್ತೆಯಾ ಗಿವೆ. ಪತ್ತೆಯಾ ಗಿರುವ ವಸ್ತುಗಳೆಂದರೆ, 14 ಮೊ ಬೈಲ್ ಫೋನ್‌ಗಳು,9 ಸಿಮ್ ಕಾರ್ಡ್‌ಗಳು, 5 ಮೊಬೈಲ್ ಚಾರ್ಜರ್ ಗಳು,2 ಇಯರ್‌ಫೋನ್‌ಗಳು ಮತ್ತು ವಿವಿಧ ಬಗೆಯ 10 ಚಾಕುಗಳು ಸಿಕ್ಕಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ 6 ಎಫ್‌ಐ ಆರ್‌ಗಳನ್ನು ದಾಖಲಿಸಲಾಗಿದೆ.

ಕಳೆದ ಕೆಲವು ತಿಂಗಳುಗಳಿಂದ ನಡೆದ ಒಟ್ಟು 6 ಬಾರಿಯ ಆಕಸ್ಮಿಕ ಶೋಧದಲ್ಲಿ ಪತ್ತೆಯಾದ ವಸ್ತುಗಳನ್ನ ನೋಡುವುದಾದರೆ, 67 ಮೊಬೈಲ್ ] ಫೋನ್‌ಗಳು, 14 ಚಾರ್ಜರ್‌ಗಳು, 48 ಸಿಮ್ ಕಾರ್ಡ್‌ಗಳು, 10 ಇಯರ್ ಫೋನ್, 60,880 ರೂ. ನಗದು ಹನ ಸೇರಿದಂತೆ 10 ಚಾಕುಗಳು ಕಂಡುಬಂದಿತ್ತು.

ಈ ವಸ್ತುಗಳು ಹೇಗೆ ಜೈಲಿನೊಳಗೆ ಬಂದವು..? ಎಂಬುದು ಇನ್ನೂ ದೊಡ್ಡ ಪ್ರಶ್ನೆಯಾಗಿ ಉಳಿದಿದೆ. ಖೈದಿಗಳು ಮೊಬೈಲ್ ಫೋನ್‌ಗಳನ್ನು ಬಳಸಿ ಹೊರಗಿನ ಜಗತ್ತಿ ನೊಂದಿಗೆ ಸಂಪರ್ಕದ ಲ್ಲಿದ್ದಾರೆಯೇ..? ಜೈಲಿನಲ್ಲಿಯೇ ಇದ್ದು ಹಣ ವರ್ಗಾವಣೆ ಮಾಡಿ, ರೌಡಿ ಗ್ಯಾಂಗ್‌ಗಳಿಗೆ ಸೂಚನೆ ಕಳಿಸುತ್ತಿದ್ದಾರೆಯೇ ಎಂಬ ಆತಂಕ ಪೊಲೀಸ್‌ಗಳಿಗೆ ಇದೆ. ಈ ಬಾರಿ ಪತ್ತೆಯಾದ ಮೊಬೈಲ್‌ಗಳು ಮತ್ತು ಚಾಕುಗಳು ಜೈಲಿನೊಳಗೆ ಯಾವ ರೀತಿಯಲ್ಲಿ ಬಂದವು ಎಂಬುದನ್ನು ಕುರಿತು ತನಿಖೆ ನಡೆಸಲಾಗುತ್ತಿದೆ.

ಈ ಹಿಂದೆಯೂ ಪರಪ್ಪನ ಅಗ್ರಹಾರದಲ್ಲಿ ಖ್ಯಾತ ಅಪರಾಧಿಗಳು ಮೊಬೈಲ್‌ನಲ್ಲಿ ವಿಡಿಯೋ ಕಾಲ್ ಮಾಡುತ್ತಿರುವ ದೃಶ್ಯಗಳು ವೈರಲ್ ಆಗಿದ್ದವು. ಈಗ ಮತ್ತೆ ಇಷ್ಟೊಂದು ಪ್ರಮಾಣದ ವಸ್ತುಗಳ ಪತ್ತೆಯಿಂದ ಕಾರಾಗೃಹ ಆಡಳಿತದ ಮೇಲೆ ಗಂಭೀರ ಪ್ರಶ್ನೆ ಎದ್ದಿದೆ.

ಈ ಘಟನೆಯ ಬೆನ್ನಲ್ಲೇ ಕಾರಾಗೃಹ ಇಲಾಖೆಯ ಉನ್ನತ ಅಧಿಕಾರಿಗಳು ತಕ್ಷಣ ಸಭೆ ನಡೆಸಿದ್ದು, ಜೈಲರ್‌ಗಳಿಗೆ ಹೆಚ್ಚಿನ ಜವಾಬ್ದಾರಿ ವಹಿಸುವಂತೆ ಸೂಚನೆ ನೀಡಲಾಗಿದೆ. ಜೈಲಿನ ಸುತ್ತಲೂ ಜಾಮರ್ ಹಾಕಬೇಕು, ಹೆಚ್ಚಿನ ಸಿಸಿಟಿವಿ ಕ್ಯಾಮೆರಾಗಳ ಅಳವಡಿಕೆ ಮಾಡಿ, ಖೈದಿಗಳನ್ನ ಭೇಟಿ ಮಾಡುವವರಿಗೆ ಕಟ್ಟುನಿಟ್ಟಾದ ತಪಾಸಣೆ ಆರಂಭಿಸಲು ತೀರ್ಮಾನಿಸಲಾಗಿದೆ.

## ಯತೀಂದ್ರ ಹೇಳಿಕೆ ಬಗ್ಗೆ ಸಿಎಂ ಉತ್ತರ ನೀಡ್ತಾರೆ: ಡಿಸಿಎಂ ಡಿ.ಕೆ.ಶಿವಕುಮಾರ್



**ಬೆಳಗಾವಿ:** ಸುವರ್ಣ ವಿಧಾನಸೌಧ ಮತ್ತು ಸರ್ಕಿಟ್ ಹೌಸ್ ಬಳಿ ಇಂದು ಮಾಧ್ಯ ಮ ಪ್ರತಿನಿಧಿ ಗಳೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯ ರಾಜಕೀಯ ಮತ್ತು ಪ್ರಚಲಿತ ವಿದ್ಯಮಾನಗಳ ಕುರಿತು ಹಲವು ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ನೀಡಿದರು. ವಿಶೇಷವಾಗಿ, ಮುಖ್ಯಮಂತ್ರಿ ಸ್ಥಾನ ಮತ್ತು ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಕುರಿತು ಕೇಳಲಾದ ಪ್ರಶ್ನೆಗೆ ಡಿಸಿಎಂ ನೀಡಿದ ಉತ್ತರ ಸಾಕಷ್ಟು ಕುತೂಹಲ ಮೂಡಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಮತ್ತು ವಿಧಾನ ಪರಿಷತ್ ಸದಸ್ಯರಾದ ಯತೀಂದ್ರ ಸಿದ್ದರಾಮಯ್ಯ ಅವರು, ಮುಂದಿನ ಐದು ವರ್ಷಗಳ ಕಾಲ ಸಿದ್ದರಾಮಯ್ಯ ಅವರೇ ಮುಖ್ಯ ಮಂತ್ರಿಯಾಗಿ ಮುಂದುವರಿಯುತ್ತಾರೆ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆಶಿ, ನಾಯಕತ್ವದ ಕುರಿತಾದ ಈ ಹೇಳಿಕೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಉತ್ತರ ನೀಡುತ್ತಾರೆ ಎಂದು ಹೇಳಿದ್ದಾರೆ.

ಇನ್ನೂ ವಿಧಾನಸಭೆಯಲ್ಲಿ ದ್ವೇಷ ಭಾಷಣದ ತಡೆ ವಿಧೇಯಕವನ್ನು ಮಂಡಿಸಲು ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಿರುವ ಕುರಿತು ಡಿಸಿಎಂ ಅವರನ್ನು ಪ್ರಶ್ನಿಸಿದಾಗ, ಈ ಬಿಜೆಪಿ ಪಕ್ಷದವರು ಜಾತಿ-ಜಾತಿಗಳ ಮಧ್ಯೆ, ಧರ್ಮ-ಧರ್ಮಗಳ ಮಧ್ಯೆ ದ್ವೇಷ ಬಿತ್ತುತ್ತಾರೆ. ಬಿಜೆಪಿಗರು ವೈಯಕ್ತಿಕ ನಿಂದನೆಗಳನ್ನು ಮಾಡುವ ದ್ವೇಷ ಭಾಷಣದ ಪಿತಾಮಹರು ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಂವಿಧಾನದ ಆಶಯಗಳ ಪ್ರಕಾರ ಅವರು ನಡೆದುಕೊಳ್ಳಲಿ. ಸಂವಿಧಾನಕ್ಕೆ ಗೌರವ ಕೊಡುವ ಇಚ್ಛೆ ನಿಜವಾಗಿಯೂ ಅವರಿಗಿದ್ದರೆ, ಅದನ್ನು ಕಟ್ಟುನಿಟ್ಟಾಗಿ ಪಾಲಿಸಲಿ. ದ್ವೇಷ ಭಾಷಣವನ್ನು ಮಾಡದೇ ಹೋದರೆ, ರಾಜ್ಯದಲ್ಲಿ ಯಾವುದೇ ಸಮಸ್ಯೆಯೇ ಇರುವುದಿಲ್ಲ. ಸಂವಿಧಾನದ ರಕ್ಷಣೆ ಮತ್ತು ಶಾಂತಿಯನ್ನು ಕಾಪಾಡಲು ನಾವು ಈ ಕ್ರಮ ಕೈಗೊಂಡಿದ್ದೇವೆ ಎಂದು ಹೇಳಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇತ್ತೀಚೆಗೆ ನೀಡಿದ ಹೇಳಿಕೆಯೊಂದಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್ ಪ್ರಶ್ನೆ ಮಾಡಿ, ನೆಹರು ಮತ್ತು ಇಂದಿರಾ ಗಾಂಧಿ ಅವರ ಆಳ್ವಿಕೆಯ ಸಮಯದಲ್ಲಿ 'ಮತ ಕಳ್ಳತನ' ಡೆದಿತ್ತು ಎಂಬ ಅಮಿತ್ ಶಾ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಡಿಕೆಎಸ್ ತಿರುಗೇಟು ನೀಡಿದರು.

ಅಮಿತ್ ಶಾ ಅವರು ಈ ವಿಷಯದ ಬಗ್ಗೆ ಕನಿಷ್ಟ ಜ್ಞಾನವನ್ನಾದರೂ ಹೊಂದಿರಬೇಕು. ಇಂದಿರಾ ಗಾಂಧಿ ಅವರ ಕಾಲದಲ್ಲಿ ಎಲೆಕ್ಟ್ರಾನಿಕ್ ವೋಟಿಂಗ್ ಯಂತ್ರ ಇರಲಿಲ್ಲ. ಆಗ ಕೇವಲ ಬ್ಯಾಲೆಟ್ ಪೇಪರ್‌ಗಳನ್ನು ಬಳಸಲಾಗುತ್ತಿತ್ತು. ಹೀಗಿರುವಾಗ, ಮತ ಕಳ್ಳತನ ಹೇಗೆ ಸಾಧ್ಯ ? ಅಂತಹ ಹೇಳಿಕೆ ನೀಡುವ ಮುನ್ನ ಅವರು ಇತಿಹಾಸವನ್ನು ತಿಳಿದುಕೊಳ್ಳಬೇಕು ಎಂದು ಪ್ರಶ್ನಿಸಿದರು.

## ಮಾಜಿ DG&IGP ಓಂ ಪ್ರಕಾಶ್ ಕೊಲೆಕೇಸ್ ಆರೋಪಿ ಪಲ್ಲವಿ ಕಾಟಕ್ಕೆ ಜೈಲು ಸಿಬ್ಬಂದಿ ಸುಸ್ತು



ಬೆಂಗಳೂರು: ಮಾಜಿ ಡಿಜಿಐಜಿಪಿ ಓಂ ಪ್ರಕಾಶ್ ಕೊಲೆ ಕೇಸ್‌ನ ಆರೋಪಿ ಪತ್ನಿ ಪಲ್ಲವಿ ಪರಪ್ಪನ ಅಗ್ರಹಾರ ಸೇರಿ ಬರೋಬ್ಬರಿ 9 ತಿಂಗಳು ಕಳೆದಿವೆ. ತನ್ನ ಗಂಡನನ್ನೇ ಭೀಕರವಾಗಿ ಮರ್ಡರ್ ಮಾಡಿದ್ದರೂ ಕಿಂಚಿತ್ತೂ ಪಶ್ಚತ್ತಾಪ ಪಡದ ಈಕೆ, ಗಂಡನ ಕೊಲೆ ಮಾಡಿ ಒಳ್ಳೆಯ ಕೆಲಸ ಮಾಡಿದೆ. ಈಗ ನಾನು ನನ್ನ ಮಗಳು ನೆಮ್ಮದಿಯಿಂದ ಇದ್ದೀವಿ ಎಂದು ಪ್ರತಿನಿತ್ಯ ಸಿಬ್ಬಂದಿಗೆ ಹೇಳುತ್ತಿದ್ದಾಳಂತೆ. ಅಲ್ಲದೆ, ತನ್ನನ್ನು ಹೊರಗಡೆ ಬಿಡಿ ಎಂದು ಆಗಾಗ ಕೂಗಾಡುತ್ತಿದ್ದು, ಆಕೆಯ ನಿಯಂತ್ರಣವೇ ಮಹಿಳಾ ಸಿಬ್ಬಂದಿಗೆ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ.

ವಿಚಿತ್ರ ವರ್ತನೆ ಹಿನ್ನಲೆ ಬ್ಯಾರಕ್ ಬಳಿ ಹೆಚ್ಚಿನ ನಿಗಾ ಇಡಲಾಗಿದ್ದು, ಜೊತೆಗೆ ವೈದ್ಯರಿಂದ ಕೌನ್ಸಲಿಂಗ್ ಕೂಡ ನಡೆಸಲಾಗಿದೆ. ತಂದೆಯ ಸಾವಿನ ಬಳಿಕ ತಾಯಿ ಮತ್ತು ತಂಗಿಯನ್ನ ದೂರ ಮಾಡಿರುವ ಓಂ ಪ್ರಕಾಶ್ ಅವರ ಮಗ, ಬೆಂಗಳೂರನ್ನೇ ಬಿಟ್ಟಿದ್ದಾರೆ. ಕೋರ್ಟ್‌ಗೆ ವಕೀಲರ ನೇಮಕಕ್ಕೆ ಫೋನ್ ಮೂಲಕ ಮೂರು ಬಾರಿ ಮಗನನ್ನು ಪಲ್ಲವಿ ಸಂಪರ್ಕಿಸಲು ಯತ್ನಿಸಿದ್ದರೂ ತಾಯಿಯ ಕರೆಗೆ ಮಗನಿಂದ ರೆಸ್ಪಾನ್ಸ್ ಸಿಕ್ಕಿಲ್ಲ ಎನ್ನಲಾಗಿದೆ. ಹೀಗಾಗಿ ಸರ್ಕಾರಿ ವಕೀಲರನ್ನೇ ತಮ್ಮ ಪರವಾಗಿ ಪಲ್ಲವಿ ನೇಮಿಸಿಕೊಂಡಿದ್ದಾರೆ. ಸದ್ಯ ಓರ್ವ ಐಪಿಎಸ್ ಅಧಿಕಾರಿ ಪತ್ನಿ ಜೊತೆ ಮಾತ್ರ ಪಲ್ಲವಿ ಸಂಪರ್ಕದಲ್ಲಿದ್ದು, ಅವರೊಬ್ಬರ ದೂರವಾಣಿ ನಂಬರ್ ಮಾತ್ರ ಇಟ್ಟುಕೊಂಡಿದ್ದಾರೆ ಎನ್ನಲಾಗಿದೆ.

ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ (68) ಅವರನ್ನು ಬೆಂಗಳೂರಿನ ಹೆಚ್‌ಎಸ್‌ಆರ್ ಲೇಔಟ್ ನಿವಾಸದಲ್ಲಿ ಹತ್ಯೆ ಮಾಡಲಾಗಿತ್ತು. 8 ರಿಂದ10 ಬಾರಿ ಚಾಕುವಿನಿಂದ ಇರಿದು ಓಂ ಪ್ರಕಾಶ್ ಅವರನ್ನು ಪತ್ನಿ ಪಲ್ಲವಿಯೇ ಹತ್ಯೆ ಮಾಡಿದ್ದರು. ಇನ್ನು, ಪತಿ ಮೃತಪಟ್ಟ ಬಳಿಕ, ಮತ್ತೋರ್ವ ನಿವೃತ್ತ ಡಿಜಿ ಮತ್ತು ಐಜಿಪಿಯ ಪತ್ನಿಗೆ ವಿಡಿಯೋ ಕರೆ ಮಾಡಿ, ಅಂತ ಪಲ್ಲವಿ ಹೇಳಿದ್ದರು.

ಒಂದು ವಾರದಿಂದ ಮನೆಯಲ್ಲಿ ಜಗಳ ನಡೆಯುತ್ತಿತ್ತು. ಪದೇಪದೆ ಗನ್ ತಂದು ನನಗೆ, ನನ್ನ ಮಗಳಿಗೆ ಬೆದರಿಕೆ ಹಾಕುತ್ತಿದ್ದರು. ಶೂಟ್ ಮಾಡುವುದಾಗಿ ಹೆದರಿಸುತ್ತಿದ್ದರು. ಬೆಳಗ್ಗೆಯಿಂದ ಬೇರೆಬೇರೆ ವಿಚಾರಕ್ಕೆ ಮನೆಯಲ್ಲಿ ಜಗಳವಾಗಿತ್ತು. ಮಧ್ಯಾಹ್ನ ಜಗಳ ವಿಕೋಪಕ್ಕೆ ಹೋಗಿ ನಮ್ಮನ್ನೇ ಕೊಲೆ ಮಾಡಲು ಓಂಪ್ರಕಾಶ್ ಯತ್ನಿಸಿದ್ದರು. ಹೀಗಾಗಿ ಜೀವ ಉಳಿಸಿಕೊಳ್ಳಲು ಕೊಲೆ ಮಾಡಿರೋದಾಗಿ ಪೊಲೀಸರ ವಿಚಾರಣೆ ವೇಳೆ ಪಲ್ಲವಿ ತಿಳಿಸಿದ್ದರು.

## ನೈಟ್‌ಕ್ಲಬ್ ಅಗ್ನಿ ದುರಂತ: ಕಟ್ಟಡ ನೆಲಸಮಗೊಳಿಸಲು ಗೋವಾ ಸಿಎಂ ಆದೇಶ



**ಗೋವಾ**: ನೈಟ್ ಕ್ಲಬ್‌ನಲ್ಲಿ ಶನಿವಾರ ತಡರಾತ್ರಿ ಸಂಭವಿಸಿದ ಭೀಕರ ಅಗ್ನಿ ಅವಘಡವು 25ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದರು. ಈ ಹಿನ್ನೆಲೆಯಲ್ಲಿ ಗೋವಾ ಸರ್ಕಾರ ಕ್ರಮಕ್ಕೆ ಇಳಿದಿದೆ. ಬಿರ್ಚ್ ಬೈ ರೋಮಿಯೋ ಲೇನ್ ನೈಟ್‌ಕ್ಲಬ್‌ನ್ನು ಗೋವಾ ಸಿಎಂ ಪ್ರಮೋದ್ ಸಾವಂತ್ ನೆಲಸಮಗೊಳಿಸಲು ಆದೇಶ ಹೊರಡಿಸಿದ್ದಾರೆ. ಅಲ್ಲದೆ, ದುರಂತಕ್ಕೆ ಕಾರಣಕಾರರಾಗಿ ಪರಾರಿಯಾಗಿರುವ ಕ್ಲಬ್ ಮಾಲೀಕರಾದ ಸೌರವ್ ಲುಥ್ರಾ ಮತ್ತು ಗೌರವ್ ಲುಥ್ರಾ ಇವರ ವಿರುದ್ಧ ಇಂಟರ್‌ಪೋಲ್ ಬ್ಲೂ ಕಾರ್ನರ್ ನೋಟಿಸ್ ಕೂಡಾ ಜಾರಿಯಾಗಿದೆ.

ಉತ್ತರ ಗೋವಾದ ಅರ್ಪೋರಾ ಗ್ರಾಮದಲ್ಲಿರುವ ಈ ನೈಟ್‌ಕ್ಲಬ್‌ನಲ್ಲಿ ಬೆಂಕಿ ಅವಘಡ ಸಂಭವಿಸಿದ್ದು, ಕ್ಲಬ್‌ನ ಮಾಲೀಕರು ಸೌರವ್ ಲುಥ್ರಾ ಮತ್ತು ಗೌರವ್ ಲುಥ್ರಾ ಸಹೋದರರು ಡಿಸೆಂಬರ್ 7ರ ಬೆಳಗ್ಗೆ, ಅಂದರೆ ಅಗ್ನಿ ಅಪಘಾತ ಸಂಭವಿಸಿ ಕೇವಲ ಕೆಲವೇ ಗಂಟೆಗಳ ನಂತರ, ಇಂಡಿಗೋ ವಿಮಾನದ ಮೂಲಕ ಥೈಲ್ಯಾಂಡ್‌ನ ಫುಕೆಟ್‌ಗೆ ಪರಾರಿಯಾಗಿದ್ದಾರೆ.

ಈ ಘಟನೆಗೆ ಸಂಬಂಧಿಸಿದಂತೆ ತನಿಕೆ ನಡೆಸಲು ಗೋವಾ ಪೊಲೀಸರು ಲುಥ್ರಾ ಸಹೋದರರ ಮೇಲೆ ಲುಕ್‌ಔಟ್ ನೋಟಿಸ್ ಹೊರಡಿಸಿದ್ದರು. ಈ ನೋಟಿಸ್‌ನ್ನು ದೆಹಲಿಯ ಜಿಟಿಬಿ ನಗರದಲ್ಲಿರುವ ಅವರ ನಿವಾಸಕ್ಕೆ ಕಳುಹಿಸಲಾಗಿದೆ. ದೇಶ ತೊರೆದಿರುವುದರಿಂದ ಇವರನ್ನು ಪತ್ತೆಹಚ್ಚುವುದು, ಇಂಟರ್‌ಪೋಲ್ ಸಹಾಯದಿಂದ ಜಾರಿಯಾದ ಬ್ಲೂ ಕಾರ್ನರ್ ನೋಟಿಸ್ ಮೂಲಕ ಅವರ ಬಗ್ಗೆ ಮಾಹಿತಿ ಸಂಗ್ರಹಿಸಲು ಪ್ರಯತ್ನಿಸಲಾಗುತ್ತಿದೆ. ಈ ನೋಟಿಸ್ ಪ್ರಮುಖ ಆರೋಪಿಗಳು ಅಂತರರಾಷ್ಟ್ರೀಯ ಗಡಿಗಳನ್ನು ದಾಟಿದಾಗ ಅವರು ಎಲ್ಲಿದ್ದಾರೆಂಬ ಮಾಹಿತಿ ಸ್ಥಳೀಯ ತನಿಖಾ ಸಂಸ್ಥೆಗಳಿಗೆ ತಲುಪುವಂತೆ ಮಾಡುತ್ತದೆ.

ಈ ನಡುವೆ, ದೆಹಲಿಯಲ್ಲಿ ಲುಥ್ರಾ ಸಹೋದರರು ಮತ್ತು ಅವರ ಸಹಚರರ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿ ತನಿಖೆಯನ್ನು ತೀವ್ರಗೊಳಿಸಲಾಗಿದೆ.

ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರು ದುರಂತದ ನಂತರ ತಕ್ಷಣ ಪ್ರತಿಕ್ರಿಯೆ ನೀಡಿದ್ದು, ಸುರಕ್ಷತಾ ನಿಯಮಗಳನ್ನು ಗಂಭೀರವಾಗಿ ಉಲ್ಲಂಘಿಸಿದ ರೋಮಿಯೋ ಲೇನ್ ನೈಟ್‌ಕ್ಲಬ್‌ನ್ನು ತಕ್ಷಣ ನೆಲಸಮಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ. "ಮಾನವ ಜೀವಗಳೊಂದಿಗೆ ಆಟವಾಡಲು ಯಾರಿಗೂ ಹಕ್ಕಿಲ್ಲ. ಸುರಕ್ಷತಾ ಮಾನದಂಡಗಳನ್ನು ಪಾಲಿಸದ ಯಾವುದೇ ಕಟ್ಟಡ, ಕ್ಲಬ್ ಅಥವಾ ಸಂಸ್ಥೆಯನ್ನು ಸರ್ಕಾರ ಬಿಟ್ಟುಕೊಡುವುದಿಲ್ಲ," ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದ್ದಾರೆ.

## ಪಕ್ಷದೊಳಗೆ ಎಸ್‌ಐಆರ್ ನಡೆಸಿದಾಗ ಮಾತ್ರ ಕಾಂಗ್ರೆಸ್ ಉಳಿಯುತ್ತೆ: ಪ್ರಲ್ಹಾದ್ ಜೋಶಿ



ನವದೆಹಲಿ:ಸಂಸತ್ತಿನಲ್ಲಿ ಚಳಿಗಾಲದ ಅಧಿವೇಶನ ಆರಂಭವಾಗಿದ್ದು, ಚುನಾವಣಾ ಸುಧಾರಣೆಗಳ ಕುರಿತು ಚರ್ಚೆ ನಡೆಯುತ್ತಿದೆ. ವಿರೋಧ ಪಕ್ಷಗಳು ಎಸ್‌ಐಆರ್ ಬಗ್ಗೆ ಪ್ರಶ್ನೆಗಳನ್ನು ಎತ್ತುತ್ತಿವೆ. ದೇಶದ ಪ್ರಧಾನಿ ಮತ್ತು ಮುಖ್ಯ ಮಂತ್ರಿಗಳನ್ನು ನುಸುಳುಕೋರರು ಆಯ್ಕೆ ಮಾಡುವುದಿಲ್ಲ, ಆದ್ದರಿಂದ ಎಸ್‌ಐಆರ್ ಅಗತ್ಯ ಎಂದು ಆಡಳಿತ ಪಕ್ಷ ವಾದಿಸುತ್ತಿದೆ. ಈ ಸಂದರ್ಭದಲ್ಲಿ ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ(Pralhad Joshi) ವಿಪಕ್ಷಗಳಿಗೆ ತಿರುಗೇಟು ನೀಡಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲೇ ವಿಶೇಷ ತೀವ್ರ ಪರಿಷ್ಕರಣೆಯ ಅಗತ್ಯವಿದೆ ಎಂದಿದ್ದಾರೆ.

ಕಾಂಗ್ರೆಸ್ ಪಕ್ಷದಲ್ಲಿ ರಾಜೀವ್ ಗಾಂಧಿ, ಇಂದಿರಾ ಗಾಂಧಿ, ಸೋನಿಯಾ ಗಾಂಧಿ, ಪ್ರಿಯಾಂಕಾ ಗಾಂಧಿ, ರಾಹುಲ್ ಗಾಂಧಿ ಹೀಗೆ ಬರೀ ನಕಲಿ ಗಾಂಧಿಗಳದ್ದೇ ಅಧಿಕಾರ ಮುಂಚೂಣಿಯಲ್ಲಿದೆ. ಹಾಗಾಗಿ ಕಾಂಗ್ರೆಸ್ ಪಕ್ಷದೊಳಗೇ ಮೊದಲು ಎಸ್‌ಐಆರ್ ನಡೆಯಬೇಕಿದೆ ಎಂದು ಜೋಶಿ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷದೊಳಗೆ ವಿಶೇಷ ತೀವ್ರ ಪರಿಷ್ಕರಣೆಯ ಅವಶ್ಯಕತೆಯಿದೆ. ಇದು ಸಂಭವಿಸಿದರೆ ಮಾತ್ರ ಕಾಂಗ್ರೆಸ್ ಪಕ್ಷ ಉಳಿಯುತ್ತದೆ, ಇಲ್ಲದಿದ್ದರೆ, ಅದು ನಾಶವಾಗುತ್ತದೆ ಎಂದು ಅವರು ಹೇಳಿದರು. ಲೋಕಸಭೆಯಲ್ಲಿ ಈ ವಿಷಯದ ಬಗ್ಗೆ ಗೃಹ ಸಚಿವ ಅಮಿತ್ ಶಾ ಕಾಂಗ್ರೆಸ್ ಪಕ್ಷವನ್ನು ತೀವ್ರವಾಗಿ ಟೀಕಿಸಿದ ಸಂದರ್ಭದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಹೇಳಿಕೆ ಬಂದಿದೆ. ಲೋಕಸಭೆಯಲ್ಲಿ ಚುನಾವಣಾ ಸುಧಾರಣೆಗಳ ಕುರಿತು ನಡೆದ ಚರ್ಚೆಯ ಸಂದರ್ಭದಲ್ಲಿ ಮಾತನಾಡಿದ ಗೃಹ ಸಚಿವರು, ರಾಹುಲ್ ಗಾಂಧಿಯವರ ಇತ್ತೀಚಿನ ಮೂರು ಪತ್ರಿಕಾಗೋಷ್ಠಿಗಳನ್ನು ಉಲ್ಲೇಖಿಸಿ, ಚುನಾವಣಾ ಆಯೋಗದ ವಿರುದ್ಧ ಅವರು ಮಾಡಿರುವ ಆರೋಪಗಳನ್ನು ಸುಳ್ಳು ಎಂದು ತಳ್ಳಿಹಾಕಿದರು.

ರಾಹುಲ್ ಗಾಂಧಿಯವರ ಹೇಳಿಕೆ ಮತ್ತು ಅಮಿತ್ ಶಾರ ವ್ಯಂಗ್ಯ ಹರಿಯಾಣದ ಒಂದೇ ಮನೆಯಲ್ಲಿ ಜಾಸ್ತಿಸಂಖ್ಯೆಯಲ್ಲಿ ವೋಟರ್ಸ್ ಇದ್ದಾರೆ ಅನ್ನೋ ರಾಹುಲ್ ಆರೋಪಕ್ಕೆ ಅಮಿತ್ ಶಾ ತಿರುಗೇಟು ಕೊಟ್ಟರು. ಈ ವೇಳೆ, ಆಕ್ಷೇಪಿಸಿದ ರಾಹುಲ್ ಗಾಂಧಿ, ನಾನು ನಡೆಸಿರುವ 3 ಸುದ್ದಿಗೋಷ್ಠಿಗಳ ಡೇಟಾ ಬಗ್ಗೆ ಓಪನ್ ಡಿಬೇಟ್ ಮಾಡೋಣ ಅಂತ ಸವಾಲ ಹಾಕಿದ್ದಾರೆ. ಇದಕ್ಕೆ ನಿಮ್ಮ ಇಷ್ಟದಂತೆ ಸಂಸತ್ತು ನಡೆಯಲ್ಲ ಅಂತ ಅಮಿತ್ ಶಾ ಕೌಂಟರ್ ಕೊಟ್ಟಿದ್ದಾರೆ.

ಬಿಜೆಪಿ ಮತ್ತು ಎನ್‌ಡಿಎ ಚರ್ಚೆಯಿಂದ ಎಂದಿಗೂ ಹಿಂದೆ ಸರಿಯುವುದಿಲ್ಲ. ಎಲ್ಲಾ ವಿಷಯಗಳ ಬಗ್ಗೆ ಚರ್ಚಿಸಲು ನಾವು ಸಿದ್ಧರಿದ್ದೇವೆ. ನ್ಯಾಯಯುತ ಚುನಾವಣೆಗಳನ್ನ ನಡೆಸುವ ಜವಾಬ್ದಾರಿಯನ್ನು ಚುನಾವಣಾ ಆಯೋಗ ಹೊಂದಿದೆ. ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಮತ್ತು ತಿದ್ದುಪಡಿ ಮಾಡುವ ಜವಾಬ್ದಾರಿಯನ್ನು ಚುನಾವಣಾ ಆಯೋಗವೂ ಹೊಂದಿದೆ ಎಂದು ಅಮಿತ್ ಶಾ ಹೇಳಿದರು.

325ನೇ ವಿಧಿಯು ಯಾವುದೇ ಅರ್ಹ ಮತದಾರರನ್ನ ಪಟ್ಟಿಯಿಂದ ಹೊರಗಿಡುವುದನ್ನ ನಿಷೇಧಿಸುತ್ತದೆ. ಮತದಾರರ ಮಾನದಂಡಗಳು 326ನೇ ವಿಧಿಯಲ್ಲಿವೆ. ಮೊದಲ ಅವಶ್ಯಕತೆಯೆಂದರೆ ಮತದಾರನು ಭಾರತೀಯ ಪ್ರಜೆಯಾಗಿರಬೇಕು. 2ನೇಯದು ಅವರು 18 ವರ್ಷಕ್ಕಿಂತ ಮೇಲ್ಪಟ್ಟವರಾ ಗಿರಬೇಕು. ಚುನಾವಣಾ ಆಯೋಗವು ಈ ಎಲ್ಲಾ ಅರ್ಹತಾ ಮಾನದಂಡಗಳನ್ನ ಪರಿಶೀಲಿಸುವ ಮತ್ತು ಶಾಸನ ಶಿಫಾರಸು ಮಾಡುವ ಅಧಿಕಾರ ನೀಡಲಾಗಿದೆ. ಮೊದಲ ಎಸ್ ಐಆರ್ 1952 ರಲ್ಲಿ ನಡೆಯಿತು. ಆ ಸಮಯದಲ್ಲಿ, ಜವಾಹರಲಾಲ್ ನೆಹರು ಕಾಂಗ್ರೆಸ್ ಪಕ್ಷದ ಪ್ರಧಾನಿಯಾಗಿದ್ದರು. ಅಂದಿನಿಂದ ಹಲವಾರು ಬಾರಿ ಎಸ್‌ಐಆರ್ ಗಳನ್ನು ನಡೆಸಲಾಗಿದೆ. 2004 ರ ನಂತರ, ಈಗ 2025 ರಲ್ಲಿ ಎಸ್‌ಐ ಆರ್ ನಡೆಸಲಾಗುತ್ತಿದೆ ಮತ್ತು ಪ್ರಸ್ತುತ ಎನ್‌ಡಿಎ ಸರ್ಕಾರವಿದೆ. 2004 ರವರೆಗೆ, ಯಾವುದೇ ಪಕ್ಷವು ಎಸ್‌ಐಆರ್ ಪ್ರಕ್ರಿಯೆಯನ್ನು ವಿರೋಧಿಸಲಿಲ್ಲ ಏಕೆಂದರೆ ಅದು ಚುನಾವಣೆಯ ಪಾವಿತ್ರ್ಯವನ್ನು ಉಳಿಸಿಕೊಳ್ಳುವ ಉದ್ದೇಶವನ್ನು ಹೊಂದಿತ್ತು ಎಂದು ಅಮಿತ್ ಶಾ ಹೇಳಿದರು.

ಪ್ರ ಜಾ ಪ್ರ ಭು ತ್ವ ದ ಲ್ಲಿ ಚುನಾವ ಣೆಗಳಿಗೆ ಆಧಾರವಾಗಿರುವ ಮತದಾರರ ಪಟ್ಟಿಯು ದೋಷಪೂರಿತವಾಗಿದ್ದರೆ, ಚುನಾವಣೆ ಹೇಗೆ ನ್ಯಾಯಯುತವಾಗಿರುತ್ತದೆ ಎಂದು ಅವರು ಹೇಳಿದರು. ಮತದಾರರ ಪಟ್ಟಿಯ ನಿಯತಕಾಲಿಕವಾಗಿ ಸಂಪೂರ್ಣ ಪರಿಷ್ಕರಣೆ ಅತ್ಯಗತ್ಯ. ಆದ್ದರಿಂದ, ಚುನಾವಣಾ ಆಯೋಗವು 2025 ರಲ್ಲಿ ಎಸ್ ಐಆರ್ ನಡೆಸಲು ನಿರ್ಧರಿಸಿತು. ಒಬ್ಬ ಮತದಾರರು ಒಂದಕ್ಕಿಂತ ಹೆಚ್ಚು ಮತದಾರರ ಚೀಟಿಯನ್ನು ಹೊಂದಿರಬಾರದು. ಮೃತ ವ್ಯಕ್ತಿಗಳ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಸೇರಿಸಬಾರದು. ಈಗ ಮತದಾರರ ಪಟ್ಟಿಯ ಶುದ್ಧೀಕರಣ ನಡೆದಿದೆ ಎಂದರು.

## ಉದ್ಯಮಿ ಜೊತೆ ಮಹಿಳಾ ಪೊಲೀಸ್ ಅಧಿಕಾರಿ ಲವ್ವಿ ಡವ್ವಿ



**ಛತ್ತೀಸ್‌ಗಢ:** ರಾಯ್ ಪುರದಲ್ಲಿ ಒಂದು ದೊಡ್ಡ ವಿವಾದ ಸೃಷ್ಟಿಯಾಗಿದೆ. ಯುವ ಮಹಿಳಾ ಪೊಲೀಸ್ ಅಧಿಕಾರಿ, ಡೆಪ್ಯೂಟಿ ಸೂಪರಿಂಟೆಂಡೆಂಟ್ ಆಫ್ ಪೊಲೀಸ್ (DSP) ಕಲ್ಪನಾ ವರ್ಮಾ ಅವರ ಮೇಲೆ ರಾಯ್‌ಪುರದ ಪ್ರಮುಖ ಹೋಟೆಲ್ ಉದ್ಯಮಿ ದೀಪಕ್ ಟಂಡನ್ ಗಂಭೀರ ಆರೋಪ ಮಾಡಿದ್ದಾರೆ. ಕಲ್ಪನಾ ವರ್ಮಾ ನಕ್ಸಲ್ ಪೀಡಿತ ದಂತೇವಾಡದಲ್ಲಿ ಡಿಎಸ್‌ಪಿ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೆ ಈಗ ಅವರ ಮೇಲೆ ಲವ್ ಟ್ರ್ಯಾಪ್ ಮಾಡಿ ಸುಮಾರು 2 ಕೋಟಿ ರೂಪಾಯಿ ಹಣ, ಐಷಾರಾಮಿ ಕಾರು, ವಜ್ರದ ಉಂಗುರ ಸೇರಿದಂತೆ ಲಕ್ಷಾಂತರ ಮೌಲ್ಯದ ಆಭರಣಗಳನ್ನು ವಂಚಿಸಿದ್ದಾರೆ ಎಂಬ ಆರೋಪ ಬಂದಿದೆ.

ದೀಪಕ್ ಟಂಡನ್ ಮತ್ತು ಅವರ ಪತ್ನಿ ಬರ್ಖಾ ಟಂಡನ್ ಖಮರ್ದಿಹ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. 2021ರಲ್ಲಿ ಸ್ನೇಹಿತನ ಮೂಲಕ ಕಲ್ಪನಾ ವರ್ಮಾ ಅವರನ್ನು ಭೇಟಿಯಾದ ನಂತರ ಇಬ್ಬರ ನಡುವೆ ಸ್ನೇಹ ಬೆಳೆದಿತ್ತು. ಕ್ರಮೇಣ ಇದು ಆತ್ಮೀಯ ಸಂಬಂಧವಾಗಿ ಬದಲಾಯಿತು. ಮದುವೆಯ ಭರವಸೆ ನೀಡಿ ಕಲ್ಪನಾ ಅವರು ದೀಪಕ್ ಅವರಿಂದ ನಾನಾ ರೀತಿಯ ಕಾರಣ ಹೇಳಿ ಹಣ ಮತ್ತು ಉಡುಗೊರೆಗಳನ್ನು ಪಡೆಯುತ್ತಿದ್ದರು ಎಂದು ಟಂಡನ್ ಆರೋಪಿಸಿದ್ದಾರೆ. ನಾಲ್ಕು ವರ್ಷಗಳಲ್ಲಿ ಸುಮಾರು 2 ಕೋಟಿ ರೂಪಾಯಿ ನಗದು, 12 ಲಕ್ಷ ಮೌಲ್ಯದ ವಜ್ರದ ಉಂಗುರ, 5 ಲಕ್ಷದ ಚಿನ್ನದ ಆಭರಣ, 1 ಲಕ್ಷದ ಬಳೆ ಮತ್ತು ಕಾರು ಸೇರಿದಂತೆ ಒಂದು ಹೋಟೆಲ್‌ನ ಮಾಲೀಕತ್ವವನ್ನೂ ಕಲ್ಪನಾ ಅವರ ಸಹೋದರನ ಹೆಸರಿಗೆ ವರ್ಗಾಯಿಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ಕಲ್ಪನಾ ಅವರು ತಮ್ಮ ಪತ್ನಿಗೆ ಡಿವೋರ್ಸ್ ನೀಡುವಂತೆ ಒತ್ತಡ ಹೇರಿದರು. ಹಣ ವಾಪಸ್ ಕೇಳಿದಾಗ ಪೊಲೀಸ್ ಅಧಿಕಾರದ ದುರುಪಯೋಗ ಮಾಡಿ ಬೆದರಿಕೆ ಹಾಕಿದರು ಎಂದು ದೀಪಕ್ ಟಂಡನ್ ಹೇಳಿಕೊಂಡಿದ್ದಾರೆ. ಈ ಆರೋಪಗಳನ್ನು ಸಾಬೀತುಪಡಿಸಲು ವಾಟ್ಸಾಪ್ ಚಾಟ್‌ಗಳು, ಸಿಸಿಟಿವಿ ದೃಶ್ಯಗಳು ಮತ್ತು ಇತರ ಡಿಜಿಟಲ್ ಸಾಕ್ಷ್ಯಗಳನ್ನು ಪೊಲೀಸರಿಗೆ ಸಲ್ಲಿಸಲಾಗಿದೆ. ಈ ಚಾಟ್‌ಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ ದೊಡ್ಡ ಚರ್ಚೆಗೆ ಕಾರಣವಾಗಿವೆ.

ಆದರೆ ಕಲ್ಪನಾ ವರ್ಮಾ ಎಲ್ಲ ಆರೋಪಗಳನ್ನೂ ತಳ್ಳಿಹಾಕಿದ್ದಾರೆ. ಇದು ತಮ್ಮ ತಂದೆ ಹೇಮಂತ್ ವರ್ಮಾ ಮತ್ತು ದೀಪಕ್ ಟಂಡನ್ ನಡುವಿನ ಹಳೆಯ ಹಣಕಾಸು ವ್ಯವಹಾರದ ವಿವಾದದಿಂದ ಶುರುವಾಗಿದ್ದು ಎಂದು ಹೇಳಿದ್ದಾರೆ. ಟಂಡನ್ ಅವರ ಪತ್ನಿ ಬರ್ಖಾ ನೀಡಿದ ಚೆಕ್ ಬೌನ್ಸ್ ಆಗಿ ಕೋರ್ಟ್ ಕೇಸ್ ನಡೆಯುತ್ತಿದೆ. ಈ ಕೇಸ್‌ನಿಂದ ತಪ್ಪಿಸಿಕೊಳ್ಳಲು ತಮ್ಮ ಹೆಸರನ್ನು ಎಳೆದೊಯ್ಯಲಾಗುತ್ತಿದೆ ಎಂದು ಕಲ್ಪನಾ ಆರೋಪಿಸಿದ್ದಾರೆ. ವೈರಲ್ ಚಾಟ್‌ಗಳು ಫೇಕ್ ಎಂದೂ, ತಮ್ಮ ಸೋಶಿಯಲ್ ಮೀಡಿಯಾ ಫೋಟೋಗಳನ್ನು ಬಳಸಿ ತಯಾರಿಸಲಾಗಿದೆ ಎಂದೂ ಹೇಳಿದ್ದಾರೆ.

## ದ್ವೇಷ ಭಾಷಣದ ಕಾನೂನು ವಿರುದ್ಧ ಬಿಜೆಪಿ ಕಾನೂನು ಹೋರಾಟ

**ಬೆಂಗಳೂರು**: ಕರ್ನಾಟಕ ರಾಜ್ಯ ಸರ್ಕಾರ ಇಂದು ದ್ವೇಷ ಭಾಷಣದ) ವಿರುದ್ಧ ಕಾನೂನು ತಂದಿರುವುದು ಸಂವಿಧಾನದ ವಿರುದ್ಧವಿದೆ. ನಾವು ಇದನ್ನು ಖಂಡಿಸುತ್ತೇವೆ. ಅಲ್ಲದೇ ಇದರ ವಿರುದ್ಧ ಬಿಜೆಪಿ (BJP) ಕಾನೂನಾತ್ಮಕ ಹೋರಾಟ ಮಾಡಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ನಮ್ಮ ವಾಕ್ ಸ್ವಾತಂತ್ರ್ಯ, ವ್ಯಕ್ತಿ ಸ್ವಾತಂತ್ರ್ಯ ಮೊಟಕುಗೊಳಿಸುವ ಕಾನೂನು. ಈಗಾಗಲೇ ದ್ವೇಷದ ಭಾಷಣ ತಡೆಯಲು ಸಾಕಷ್ಟು ಕಾನೂನುಗಳಿವೆ. ಆ ಕಾನೂನು ಬಳಸಬಹುದು. ಆದರೆ ಹತ್ತು ವರ್ಷದ ಶಿಕ್ಷೆ ಕಾನೂನು ತಂದು ಸರ್ಕಾರದ ವಿರುದ್ಧ, ಅವರ ಪಕ್ಷದ ವಿರುದ್ಧ ಮಾತನಾಡುವವರಿಗೆ ನಾನು ಬೇಲೆಬಲ್ ವಾರೆಂಟ್ ತಂದು ಜೈಲಿಗೆ ಕಳುಹಿಸುವ ಹುನ್ನಾರ ಇದರಲ್ಲಿ ಇದೆ. ಇದು ಪ್ರಜಾಪ್ರಭುತ್ವ ವಿರುದ್ಧ ಎಂದು ಆರೋಪಿಸಿದ್ದಾರೆ. ಒಂದು ರೀತಿಯಲ್ಲಿ ಕರ್ನಾಟಕದಲ್ಲಿ ತುರ್ತುಪರಿಸ್ಥಿತಿ ಘೋಷಣೆ ಆಗಿದೆ ಅಂತ ಭಾವನೆ ಬರುತ್ತಿದೆ. ಸರ್ಕಾರ ಯಾವುದೇ ಅಭಿವೃದ್ಧಿ ಕೆಲಸ ಮಾಡದೇ ಎಲ್ಲ ರಂಗದಲ್ಲಿ ಭ್ರಷ್ಟಾಚಾರದಲ್ಲಿ ತೊಡಗಿರುವ ಸರ್ಕಾರ ದೀನ ದಲಿತರ ಹಣವನ್ನು ಲಪಟಾಯಿಸಿರುವ ಸರ್ಕಾರ ತನ್ನ ತಪ್ಪನ್ನು ಮುಚ್ಚಿಕೊಳ್ಳಲು ಅದರ ವಿರುದ್ಧ ಯಾರಾದರೂ ಧ್ವನಿ ಎತ್ತಿದರೆ, ಅವರ ಧ್ವನಿಯನ್ನು ದಮನ ಮಾಡುವ ದಮನಕಾರಿ ಕಾನೂನು ತಂದಿದ್ದಾರೆ. ಇದು ಒಂದು ರೀತಿಯಲ್ಲಿ ಸಿದ್ದರಾಮಯ್ಯ ಅವರ ರಾಜಕಾರಣಕ್ಕೆ ಕಪ್ಪು ಚುಕ್ಕೆ. ವ್ಯಕ್ತಿ ಸ್ವಾತಂತ್ರ್ಯ ಹಾಗೂ ಸಂವಿಧಾನದ ಬಗ್ಗೆ ಮಾತನಾಡುವ ಸಿಎಂ ಸಿದ್ದರಾಮಯ್ಯ ಅವರು ಅದರ ತದ್ವಿರುದ್ಧವಾಗಿ ನಡೆದುಕೊಂಡಿದ್ದಾರೆ. ನಾವು ಇದನ್ನು ಖಂಡಿಸುತ್ತೇವೆ, ಅಲ್ಲದೇ ಇದರ ವಿರುದ್ಧ ಬಿಜೆಪಿ ಕಾನೂನಾತ್ಮಕ ಹೋರಾಟ ಮಾಡುತ್ತದೆ ಎಂದು ಎಚ್ಚರಿಸಿದ್ದಾರೆ.

ಸುದ್ದಿ ಹಾಗೂ
ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.